ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 179 | ದಿನಾಂಕ : 29-04-2026 Date : 29-04-2026 | ಬುಧವಾರ Wednesday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಐಪಿಎಲ್ ಟಿಕೆಟ್ ಅಕ್ರಮ ಮಾರಾಟಗಾರರಿಗೆ ಬಿಸಿ ಮುಟ್ಟಿಸಿದ ಬೆಂಗಳೂರು ಪೊಲೀಸ್: 24 ಆರೋಪಿಗಳ ಬಂಧನ್

**ಬೆಂಗಳೂರು,ಏ.28**-ಇಂಡಿಯನ್ ಪ್ರೀಮಿಯರ್ ಲೀಗ್ ಪಂದ್ಯಗಳ ಟಿಕೆಟ್‌ಗಳನ್ನ ಅಕ್ರಮವಾಗಿ, ಅಧಿಕ ಬೆಲೆಗೆ ಮಾರಾಟ ಮಾಡುತ್ತಿದ್ದವರಿಗೆ ಬೆಂಗಳೂರು ಕೇಂದ್ರ ವಿಭಾಗದ ಪೊಲೀಸರು ಬಿಸಿ ಮುಟ್ಟಿಸಿದ್ದಾರೆ. ಪಂದ್ಯಾವಳಿ ಆರಂಭವಾದ ಬಳಿಕ ಕಳೆದ ಒಂದು ತಿಂಗಳ ಅವಧಿಯಲ್ಲಿ ಬೆಂಗಳೂರು ಕೇಂದ್ರ ವಿಭಾಗದಲ್ಲಿ 17 ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದ್ದು, 24 ಮಂದಿಯನ್ನು ಬಂಧಿಸಲಾಗಿದೆ.

ಆರೋಪಿಗಳಿಂದ ಒಟ್ಟು 37 ಐಪಿಎಲ್ ಟಿಕೆಟ್ ಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ 16 ಪ್ರಕರಣಗಳು ದಾಖಲಾಗಿದ್ದು, ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ಒಂದು ಪ್ರಕರಣ ದಾಖಲಾಗಿದೆ ಎಂದು ಬೆಂಗಳೂರು ಕೇಂದ್ರ ವಿಭಾಗದ ಡಿಸಿಪಿ ಅಕ್ಷಯ್ ಎಂ ಹಕೇ ತಿಳಿಸಿದ್ದಾರೆ. ➘ 4

## ಇದೀಗ ಮತ್ತೊಂದು ಕ್ಷೇತ್ರದಲ್ಲಿ ಬೆಂಗಳೂರು ದೇಶದಲ್ಲಿಯೇ ನಂಬರ್ 1: ಮಾಹಿತಿ ಹಂಚಿಕೊಂಡ ಸಚಿವ ಪ್ರಿಯಾಂಕ್ ಖರ್ಗೆ!

**ಬೆಂಗಳೂರು,ಏ.28**-ಭಾರತದ ಸ್ಟಾರ್ಟ್‌ಅಪ್ ಇಕೋ ಸಿಸ್ಟಂಗಳಲ್ಲಿ ಬೆಂಗಳೂರು 2026 ರ ಮೊದಲ ತ್ರೈಮಾಸಿಕದಲ್ಲಿ 89 ಒಪ್ಪಂದಗಳ ಮೂಲಕ 823 ಮಿಲಿಯನ್ ನಿಧಿಯೊಂದಿಗೆ ತನ್ನ ನಾಯಕತ್ವವನ್ನು ಮುಂದು ವರಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನ ಸಾಧನೆಯನ್ನು ಭಾರತದ ಇತರ ಪ್ರಮುಖ ನಗರಗಳಿಗೆ ಹೋಲಿಸಿದರೆ, ದೆಹಲಿ 74 ಒಪ್ಪಂದಗಳಲ್ಲಿ 538 ಮಿಲಿಯನ್ ಮತ್ತು ಮುಂಬೈ 34 ಒಪ್ಪಂದಗಳಲ್ಲಿ 402 ಮಿಲಿಯನ್ ನಿಧಿಯನ್ನು ದಾಖಲಿಸಿವೆ. ಇದು ಬಂಡವಾಳ ಹರಿವು ಮತ್ತು ಒಪ್ಪಂದದ ವೇಗ ಎರಡರಲ್ಲೂ ಇರುವ ಸ್ಪಷ್ಟ ➘ 4

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮಲಿಯಾಬಾದ್ ಪ್ರೌಢಶಾಲೆಗೆ ಶೇ. 100 ರಷ್ಟು ಫಲಿತಾಂಶ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಏ.28**-202526ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಿನ ಮಲಿಯಾಬಾದ್ ಕ್ಯಾಂಪ್ ಸರ್ಕಾರಿ ಪ್ರೌಢಶಾಲೆ ಶೇ. 100ರಷ್ಟು ಫಲಿತಾಂಶ ಸಾಧಿಸಿ ಸಾಧನೆ ಮಾಡಿದೆ.

ಒಟ್ಟು 58 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ಎಲ್ಲರೂ ಉತ್ತೀರ್ಣರಾಗಿದ್ದು, ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳಲ್ಲಿ ವೀರೇಶ್ (ತಂದೆ: ಚೆನ್ನಯ್ಯ) 557 ಅಂಕಗಳನ್ನು ಪಡೆದು ಶೇ. 89.12ರಷ್ಟು ಸಾಧನೆ ಮಾಡಿ ಶಾಲೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಮಮತಾ (ತಂದೆ: ಹೇಮರೆಡ್ಡಿ) ಹಾಗೂ ಉದಯ್ ಕುಮಾರ್ (ತಂದೆ: ವೀರೇಶ್) ಇಬ್ಬರೂ 536 ಅಂಕಗಳನ್ನು ಪಡೆದು ಶೇ. 85.76ರಷ್ಟು ಅಂಕಗಳೊಂದಿಗೆ ದ್ವಿತೀಯ ➘ 4

## ದಲಿತ ಸಿಎಂ ಬೇಡಿಕೆ ಮತ್ತೆ ಒತ್ತಿ ಹೇಳಿದ ರಾಜಣ್ಣ



**ಬೆಂಗಳೂರು,ಏ.28**-ಸಿಎಂ ಸಿದ್ದರಾಮಯ್ಯ ಅಧಿಕಾರ ಮುಂದುವರಿಸಲು ಮತ್ತು ಪದತ್ಯಾಗ ಎರಡಕ್ಕೂ ಸಿದ್ಧರಾಗಿದ್ದಾರೆ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು.

ಬೆಂಗಳೂರಲ್ಲಿ ಮಾತನಾಡಿದ ಅವರು, ಹೈಕಮಾಂಡ್ ಗೊಂದಲ ಬಗೆಹರಿಸಬೇಕು. ಗೊಂದಲ ಬಗೆಹರಿಸಿದಷ್ಟು ರಾಜ್ಯಕ್ಕೆ ಒಳ್ಳೆಯದು. ಗೊಂದಲ ಮುಂದುವರಿಯಲು ಹೈಕಮಾಂಡ್ ಅವಕಾಶ ನೀಡಬಾರದು. ಹೈಕಮಾಂಡ್ ಏನು ಹೇಳುತ್ತದೆಯೋ ಅದಕ್ಕೆ ಸಿದ್ದರಾಮಯ್ಯ ಬದ್ಧರಾಗಿದ್ದಾರೆ. ಇದು ಆತುರದಲ್ಲಿ ತೆಗೆದುಕೊಳ್ಳುವ ನಿರ್ಧಾರ ಅಲ್ಲ. ಸಿದ್ದರಾಮಯ್ಯ ಅವರು ಅಧಿಕಾರ ಮುಂದುವರಿಕೆಗೂ ಸಿದ್ದರಾಗಿದ್ದಾರೆ, ಪದತ್ಯಾಗಕ್ಕೂ ಸಿದ್ದರಾಗಿದ್ದಾರೆ ಎಂದರು.

ಇದರಲ್ಲಿ ಪಕ್ಷದ ಭವಿಷ್ಯ ಅಡಗಿರುತ್ತದೆ. ಹೀಗಾಗಿ ಹೈಕಮಾಂಡ್ ಸೂಕ್ತವಾದ ನಿರ್ಧಾರ ತೆಗೆದುಕೊಳ್ಳುವ ವಿಶ್ವಾಸವಿದೆ. ಸಿಎಂ ಜೊತೆಗೆ ಸಭೆ ಮಾಡಿದಾಗಲೂ ಅವರು ಓಪನ್ ಮೈಂಡ್‌ನಲ್ಲಿ ಇದ್ದಾರೆ. ರಾಹುಲ್ ಗಾಂಧಿ ಸೂಚನೆ ಪಾಲನೆ ಮಾಡುತ್ತೇನೆ. ಆಗ ನಿಮ್ಮೆಲ್ಲರ ಸಹಕಾರ ಇರಬೇಕು ಎಂದು ಸಿಎಂ ಅಭಿಮತ ವ್ಯಕ್ತಪಡಿಸಿದ್ದಾರೆ. ರಾಹುಲ್ ಗಾಂಧಿ ತೆಗೆದುಕೊಳ್ಳುವ ತೀರ್ಮಾನದಂತೆ ನಡೆಯೋಣ ಎಂದಿದ್ದಾರೆ ಎಂದು ತಿಳಿಸಿದರು.

ಅಧಿಕಾರ ಶಾಶ್ವತವಲ್ಲ. ಅಧಿಕಾರ ಕಳೆದುಕೊಂಡವರು ಗಳಿಸ್ತಾರೆ. ರಾಹುಲ್ ನಿರ್ದೇಶನದಂತೆ ಹೋಗಬೇಕು ಎಂಬುದು ಸಿಎಂ ಮನಸ್ಥಿತಿ. ಸಿದ್ದರಾಮಯ್ಯ ಮುಂದುವರಿಯಬೇಕು ಎಂಬ ಬಗ್ಗೆ ನಾವೆಲ್ಲ ನಮ್ಮ ಅಭಿಪ್ರಾಯವನ್ನು ಹೈಕಮಾಂಡ್‌ಗೆ ➘ 4

### ರಾಯಚೂರು ಗ್ರಾಮಾಂತರದಲ್ಲಿ 62 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ

## ಅಧಿಕಾರಿಗಳ ಸಮರ್ಪಕ ಮೇಲುಸ್ತುವಾರಿ ಮಾಡಿ-ದದ್ದಲ್ ಬಸನಗೌಡ ಸೂಚನೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.28**-ಗ್ರಾಮಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗಳಿಗೆ ಅಡ್ಡಿಪಡಿಸುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಮತ್ತು ಕಾಮಗಾರಿಗಳನ್ನು ಅಗತ್ಯ ಬಿದ್ದಲ್ಲಿ ಪೊಲೀಸ್ ಭದ್ರತೆಯೊಂದಿಗೆ ಮಾಡಬೇಕು ಎಂದು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರಿಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕುಡಿಯುವ ನೀರಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಯಚೂರು ತಾಲೂಕಿನ ವ್ಯಾಪ್ತಿಯ ಒಟ್ಟು 35 ಗ್ರಾಮ ಪಂಚಾಯತ್‌ಗಳಲ್ಲಿ 22 ಗ್ರಾಮ ಪಂಚಾಯತ್ ವ್ಯಾಪ್ತಿಯ 62 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾಗಿದ್ದು, ಈ ಬಗ್ಗೆ ಆಯಾ ಗ್ರಾಮ ಪಂಚಾಯತ್ ಅಧಿಕಾರಿಗಳು, ಆಡಳಿತಾಧಿಕಾರಿಗಳು ನಿಗಾ ವಹಿಸಬೇಕು ಎಂದರು.

ತಾಲೂಕಿನ ಪ್ರತಿ ಗ್ರಾಮ ಆಡಳಿತಾಧಿಕಾರಿಗಳು, ನಿರಂತರವಾಗಿ ಗ್ರಾಮಗಳಲ್ಲಿರುವ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಕಾರ್ಯ ಪ್ರವೃತ್ತರಾಗಬೇಕು. ಕುಡಿಯುವ ನೀರಿಗೆ ಪ್ರಥಮ ಆಧ್ಯತೆ ನೀಡಬೇಕು. ಕುಡಿಯುವ ನೀರಿನ ಸಮಸ್ಯೆಗಳನ್ನು ಕ್ರೂಡಿಕರಿಸಿ, ಅವುಗಳನ್ನು ಬಗೆಹರಿಸಲು ಬೇಕಾದ ಕಾಮಗಾರಿಗಳು ಮತ್ತು ಅದಕ್ಕೆ ಬೇಕಾದ ಅನುದಾನ ಸೇರಿದಂತೆ ಇತರೆ ಮಾಹಿತಿಗಳನ್ನು ಕ್ರೂಡಿಕರಿಸಿ, ಕ್ರಿಯಾ ಯೋಜನೆಯನ್ನು ➘ 4

## ನಗರದ ಆರೋಗ್ಯ ಕೇಂದ್ರಗಳಿಗೆವಸಂತಕುಮಾರ ದಿಢೀರ್ ಬೇಟಿ: ಸಮಸ್ಯೆಯಾಗದಂತೆ ಸೌಲಭ್ಯ ಒದಗಿಸಲು ನಿರ್ದೇಶನ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.28**-ವಿಧಾನ ಪರಿಷತ್ ಸದಸ್ಯ ಎ. ವಸಂತ್ ಕುಮಾರ್ ಅವರು ನಗರದ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೂಲಸೌಕರ್ಯಗಳ ಕೊರತೆ ಹಾಗೂ ಅವ್ಯವಸ್ಥೆಗಳ ಬಗ್ಗೆ ಆತಂಕ ವ್ಯಕ್ತಪಡಿಸಿದರು.

ಮಡ್ಡಿಪೇಟೆ ಮತ್ತು ಹರಿಜನವಾಡ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ವೇಳೆ ವೈದ್ಯರು ಸಭೆಗೆ ತೆರಳಿದ್ದರಿಂದ ಕೇಂದ್ರದಲ್ಲಿ ಕೇವಲ ಸಿಬ್ಬಂದಿಯೇ ಇದ್ದರು ಎಂಬುದು ಗಮನಕ್ಕೆ ಬಂದಿದೆ.

ಕೇಂದ್ರದಲ್ಲಿ ಅಗತ್ಯ ಔಷಧಗಳ ಕೊರತೆ ಹಾಗೂ ಸಿಬ್ಬಂದಿಗಳ ಅಭಾವ ಕಂಡುಬಂದಿದ್ದು, ದಿನದಿಂದ ದಿನಕ್ಕೆ ಹೆಚ್ಚುತ್ತಿರುವ





ರೋಗಿಗಳ ಸಂಖ್ಯೆಗೆ ತಕ್ಕಂತೆ ಸೌಲಭ್ಯಗಳಿಲ್ಲದೆ ರೋಗಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ಬಡ ರೋಗಿಗಳಿಗೆ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ದೊರೆಯಬೇಕು, ಎಲ್‌ಬಿಎಸ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೂ ಭೇಟಿ ನೀಡಿ ಆಸ್ಪತ್ರೆಯ ಸ್ವಚ್ಛತೆ, ಸಿಬ್ಬಂದಿಗಳ ಹಾಜರಾತಿ ಹಾಗೂ ಔಷಧಗಳ ಲಭ್ಯತೆ ಕುರಿತು ಪರಿಶೀಲನೆ ನಡೆಸಿದರು.

### ಉದ್ಯೋಗ ಖಾತ್ರಿ, ಕಾರ್ಮಿಕ ಬಿಸಲಿನ ತಾಪಕ್ಕೆ ನಿಧನ

## ಯಾಪಲದಿನ್ನಿ ಗ್ರಾಮದ ಕಾರ್ಮಿಕನಿಗೆ ಪರಿಹಾರ ನೀಡಲು ಒತ್ತಾಯ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.28**-ತಾಲೂಕಿನ ಯಾಪಲದಿನ್ನಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮನರೇಗಾ ಕಾಮಗಾರಿ ವೇಳೆ ಕೂಲಿ ಕಾರ್ಮಿಕರೊಬ್ಬರು ಬಿಸಿಲಿನ ತಾಪಕ್ಕೆ ಮೃತಪಟ್ಟಿರುವ ಘಟನೆ ನಡೆದಿದೆ.

ಯಾಪಲದಿನ್ನಿ ಗ್ರಾಮದ ನಿವಾಸಿ ಹುಸೇಪ್ಪ ಮಡಿವಾಳ (50) ಅವರು ಕಳೆದ ನಾಲ್ಕು ದಿನಗಳಿಂದ ಗ್ರಾಮದಲ್ಲಿನ ರಾಳ್ಳಕುಂಟಾ ಕೆರೆ ಅಭಿವೃದ್ಧಿ ಕಾಮಗಾರಿಯಲ್ಲಿ ಕೆಲಸ ಮಾಡುತ್ತಿದ್ದರು.

ನಿನ್ನೆ ಮಧ್ಯಾಹ್ನ ಸುಮಾರು 12 ಗಂಟೆ ಸುಮಾರಿಗೆ ಎರಡನೇ ಹಾಜರಿ ದಾಖಲಿಸುವ ವೇಳೆ ಫೋಟೋ ತೆಗೆಯುವ ಸಮಯದಲ್ಲಿ ಅವರು ಅಸ್ವಸ್ಥಗೊಂಡು ಕುಸಿದು ಬಿದ್ದರು.




ಸ್ಥಳದಲ್ಲಿದ್ದ ಇತರ ಕೂಲಿ ಕಾರ್ಮಿಕರು ತಕ್ಷಣ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಮಾಹಿತಿ ನೀಡಿ ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಸಾಗಿಸುವ ವೇಳೆ ಮಾರ್ಗ ಮದ್ಯದಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ತೀವ್ರ ಬಿಸಿಲು ಮತ್ತು ಉಷ್ಣಾಂಶವು ಸುಮಾರು 44 ಡಿಗ್ರಿ ಸೆಲ್ಸಿಯಸ್‌ಗೆ ಏರಿಕೆಯಾಗಿದ್ದರಿಂದ ಹುಸೇನಪ್ಪ ಅವರಿಗೆ ಲೋ ಬಿಪಿ ಉಂಟಾಗಿ ಈ ದುರಂತ ಸಂಭವಿಸಿದೆ ಎಂದು ಶಂಕಿಸಲಾಗಿದೆ.

ನರೇಗಾ ನಿಯಮಾವಳಿಯ ➘ 4

## ವೇಶ್ಯಾವಾಟಿಕೆ ದಂಧೆ ಮೇಲೆ ಪೊಲೀಸ್ ದಾಳಿ: 11 ಆರೋಪಿಗಳ ಬಂಧನ, ಇಬ್ಬರು ಮಹಿಳೆಯರ ರಕ್ಷಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಮಾನ್ವಿ, ಏ.28**-ತಾಲೂಕಿನಲ್ಲಿ ಅಕ್ರಮ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಸ್ಥಳದ ಮೇಲೆ ಪೊಲೀಸರು ದಾಳಿ ನಡೆಸಿ ಇಬ್ಬರು ಸಂತ್ರಸ್ತ ಮಹಿಳೆಯರನ್ನು ರಕ್ಷಿಸಿ, 11 ಆರೋಪಿಗಳನ್ನು ಬಂಧಿಸಿದ ಘಟನೆ ಹಿರೇಕೋಟೆಕಲ್- ಬ್ಯಾಗವಾಟ್ ರಸ್ತೆ ಸಮೀಪದ ಕೆನಾಲ್ ಬಳಿ ನಡೆದಿದೆ.



ಖಚಿತ ಮಾಹಿತಿಯ ಮೇರೆಗೆ ಕಾರ್ಯಾಚರಣೆ ನಡೆಸಿದ ಪೊಲೀಸರು ದಂಧೆ ಯನ್ನು ಭೇದಿಸಿ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.

ಈ ಪ್ರಕರಣದಲ್ಲಿ ಪ್ರಮುಖ ಆರೋಪಿಯಾದ ಮಾನ್ವಿ ಪಟ್ಟಣದ ಇಂದಿರಾನಗರ ನಿವಾಸಿ ತಾಯಪ್ಪ ಸೇರಿದಂತೆ ಇತರರನ್ನು ಬಂಧಿಸಲಾಗಿದೆ.

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಆರೋಪಿಗಳು ಕೆಲಸದ ಹುಡುಕಾಟದಲ್ಲಿದ್ದ ಬಡ ಹಾಗೂ ಮಧ್ಯಮ ವರ್ಗದ ಮಹಿಳೆಯರನ್ನು ಗುರಿಯಾಗಿಸಿಕೊಂಡು, ಹೆಚ್ಚಿನ ಸಂಬಳದ ಉದ್ಯೋಗ ನೀಡುವುದಾಗಿ ನಂಬಿಸಿ ನಂತರ ವೇಶ್ಯಾವಾಟಿಕೆಗೆ ದೂಡುತ್ತಿದ್ದರೆಂದು ತಿಳಿದುಬಂದಿದೆ.

ದಾಳಿ ವೇಳೆ ರಕ್ಷಿಸಲ್ಪಟ್ಟ ಇಬ್ಬರು ➘ 4

## ಅತಿಥಿ ಶಿಕ್ಷಕರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಪ್ರತಿಭಟನೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.28**-ಅತಿಥಿ ಶಿಕ್ಷಕರು ಮತ್ತು ಆಯಾಗಳಿಗೆ ಕಳೆದ 10 ತಿಂಗಳಿಂದ ಗೌರವಧನ ಪಾವತಿ ಮಾಡದೇ ಇರುವುದನ್ನು ಖಂಡಿಸಿ ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ (ಎಐಡಿವೈಓ) ನೇತೃತ್ವದಲ್ಲಿ ಅಥಿತಿ ಶಿಕ್ಷಕರು ಮತ್ತು ಆಯಾಗಳು ನಗರದ ಟಿಪ್ಪು ಸುಲ್ತಾನ್ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಲಾಯಿತು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಅಕ್ಷರ ಆವಿಷ್ಕಾರ ಯೋಜನೆ ಅಡಿಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಹೊಸದಾಗಿ ಪ್ರಾರಂಭವಾದ ಎಲ್‌ಕೆಜಿ, ಯುಕೆಜಿ (ಇಸಿಸಿಇ) ಹಾಗೂ ದ್ವಿಭಾಷಾ ತರಗತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ಮತ್ತು ಆಯಾಗಳಿಗೆ ಗೌರವಧನ ಪಾವತಿ ಮಾಡದೇ ಇರುವುದು ಖಂಡಿಸಿದರು.

ಅತಿಥಿ ಶಿಕ್ಷಕರು ಮತ್ತು ಆಯಾಗಳು ಗೌರವ ಧನ ಪಾವತಿ ಮಾಡದೇ ಇರುವುದರಿಂದ ಜೀವನ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕುಟುಂಬ ನಿರ್ವಹಣೆಗೆ ಸಾಲ ಮಾಡಿಕೊಂಡು ಜೀವನ ಸಾಗಿಸುವ ಪರಿಸ್ಥಿತಿ ಎದುರಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗೌರವ ಧನ ಪಾವತಿಗೆ ಬಿಇಒ, ಡಿಡಿಪಿಐ ಮತ್ತು ಜಿಲ್ಲಾಧಿಕಾರಿ, ಕೆಕೆಆರ್‌ಡಿಬಿ ಅಧ್ಯಕ್ಷರಿಗೂ ಮನವಿ ಸಲ್ಲಿಸಿದರೂ ಕೇವಲ ಭರವಸೆ ನೀಡಿದ್ದು ಈವರೆಗೆ ಈಡೇರಿಲ್ಲವೆಂದು ದೂರಿದರು.

ಅತಿಥಿ ಶಿಕ್ಷಕರಿಗೆ 12 ಸಾವಿರ ಮತ್ತು ಆಯಾಗಳಿಗರ 6250 ರೂಗಳ ಒಟ್ಟು 10 ತಿಂಗಳ ಗೌರವ ಧನ ಬಿಡುಗಡೆ ಮಾಡಬೇಕು, ಸರ್ಕಾರ

## ನಗರದಲ್ಲಿ ಸಾರ್ವಜನಿಕ ಶೌಚಾಲಯ, ಮೂತ್ರಾಲಯಗಳೇ ಮಾಯ:ಪಾಲಿಕೆ ಆಯುಕ್ತರಿಂದ ದಂಡ ಹಾಕುವ ಆದೇಶ ರದ್ದುಪಡಿಸದಿದ್ದರೆ ಕಚೇರಿಗೆ ಮುತ್ತಿಗೆ- ವಿನೋದರೆಡ್ಡಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.28**-ನಗರದಲ್ಲಿದ್ದ ಎಲ್ಲಾ ಮೂತ್ರಾಲಯಗಳ ನಾಪತ್ತೆಯಾಗಿದ್ದು, ಶೌಚಾಲಯಗಳ ವ್ಯವಸ್ಥೆಯೇ ಇಲ್ಲದೇ ಇರುವ ಮಹಾನಗರ ಪಾಲಿಕೆ ಆಯುಕ್ತರು ಸಾರ್ವಜನಿಕವಾಗಿ ಬರ್ಹಿದೆಸೆ, ಮೂತ್ರ ವಿಸರ್ಜನೆ ಮಾಡಿದರೆ ದಂಡ ಹಾಕುವದಾಗಿ ಹೇಳಿರುವದುಖಂಡನೀಯವಾಗಿದೆ. ವಾರದಲ್ಲಿ ತ್ವರಿತ ಶೌಚಾಲಯ,ಮೂತ್ರ ವ್ಯವಸ್ಥೆ ಮಾಡದೇ ಹೋದರೆ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸುವದಾಗಿ ಕರ್ನಾಟಕ ರಕ್ಷಣಾ ವೇದಿಕೆ( ನಾರಾಯಣಗೌಡ ಬಣ) ಅಧ್ಯಕ್ಷ ವಿನೋದರೆಡ್ಡಿ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಿದ್ದಷ್ಟೇ ಸಂತೋಷ. ಆದರೆ ಯಾವುದೇ ಮೂಲಭೂತ ಸೌಕರ್ಯಗಳಲ್ಲಿ ಬದಲಾವಣೆ ಕಾಣುತ್ತಿಲ್ಲ. ಆದರೆ ವ್ಯವಸ್ಥೆಯೇ ಇಲ್ಲದೇ ಕರ ನೀಡಬೇಕೆನ್ನುವ ಧೋರಣೆ ಮುಂದುವರೆಸಲಾಗುತ್ತಿದೆ.

ನಗರದಲ್ಲಿ ಈ ಹಿಂದೆ ವಿಶಾಲ್ ಮಾರ್ಟ ಬಳಿ,ಚಂದ್ರಮೌಳೇಶ್ವರ ಗುಡಿ ಬಳಿ, ರಾಜೇಂದ್ರ ಗಂಜ್, ಬಂಗಿ ಕುಂಟಾ, ಕಾಟೇದರವಾಜ್, ಡಾ.ಬಿ.ಆರ್.ಅಂಬೇಡ್ಕರ ವೃತ್ತ, ಸ್ಟೇಷನ್ ಹತ್ತಿರ ಎಂಎನ್‌ಜಿ ಕ್ಲಾಂಪ್ಲೆಕ್ಸ್ ಬಳಿಯಿದ್ದ ಮೂತ್ರಾಲಯಗಳು ಮಾಯವಾಗಿ ಹೋಗಿವೆ. ಅಂಗಡಿಗಳು, ಕಾಂಪ್ಲೆಕ್ಸ್‌ಗಳು ನಿರ್ಮಾಣ ಮಾಡಲಾಗಿದೆ. ಸಾರ್ವಜನಿಕರು ,ಮಹಿಳೆಯರು, ವೃದ್ದರೂ ಮಲಮೂತ್ರ ವಿಸರ್ಜನೆತೀವ್ರ ತೊಂದರೆ ➘ 4

### ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಕುರಿತು ಅಧಿಕಾರಿಗಳೊಂದಿಗೆ ಸಚಿವರ ಸಭೆ

# ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಅಧಿಕಾರಿಗಳೇ ಹೊಣೆ-ಸಚಿವ ತಂಗಡಗಿ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,ಏ.28-**ಜಿಲ್ಲೆಯಲ್ಲಿ ಉಂಟಾಗಿರುವ ಕುಡಿ ಯುವ ನೀರಿನ ಸಮಸ್ಯೆಯನ್ನು ಶಾಶ್ವತ ವಾಗಿ ಪರಿಹರಿಸಲು ಸಮಗ್ರ ಯೋಜನೆ ರೂಪಿಸಿ ತ್ವರಿತವಾಗಿ ಜಾರಿಗೆ ತರಬೇಕು. ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿ ಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಹೊಣೆ ಮಾಡಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆ ತೀವ್ರವಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಕೊರತೆ ಗಂಭೀರ ಸಮಸ್ಯೆಯಾಗಿ ಪರಿಣಮಿಸಿದೆ. ಜನರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಅಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಿದೆ. ತಹಶೀಲ್ದಾರರು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಬೇಕು. ಸಮಸ್ಯೆ ಇರುವ ಗ್ರಾಮಗಳಲ್ಲಿ ಖಾಸಗಿ ಬೋರ್ ವೆಲ್‌ಗಳನ್ನು ಬಾಡಿಗೆ ಪಡೆದು ಅಥವಾ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಿ. ಪ್ರತಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾ ಯತಿ, ಪಟ್ಟಣ ಪಂಚಾಯತಿ, ಪುರಸಭೆ, ತಹಶೀಲ್ದಾರ ಕಾರ್ಯಾಲಯಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ನೀಡ ಲು ಸಹಾಯವಾಣಿಯನ್ನು ಕಡ್ಡಾಯ ವಾಗಿ ತೆರೆಯಬೇಕು. ಪ್ರತಿ ನಿತ್ಯ ಬಂದ ದೂರುಗಳು, ಪರಿಹಾರಕ್ಕೆ ಕೈಗೊಂಡ ಕ್ರಮಗಳ ಕುರಿತು ವರದಿ ಸಲ್ಲಿಸಬೇಕು. ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ವಿಧಾನಸ ಭಾ ಕ್ಷೇತ್ರವಾರು ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಎಂದು ಹೇಳಿದರು.

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಲಭ್ಯತೆ ಕುರಿತು ಪ್ರತಿದಿನ ವರದಿ ಸಲ್ಲಿಸಬೇಕು. ಕೆಟ್ಟಿರುವ ಪೈಪ್‌ಲೈನ್‌ಗಳು, ಮೋಟಾರ್‌ಗಳು ಹಾಗೂ ಬೋರ್‌ವೆಲ್‌ಗಳನ್ನು ತಕ್ಷಣ ದುರಸ್ತಿ ಮಾಡಬೇಕು.

ಅಗತ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಬೇಕು. ಯಾವುದೇ ಗ್ರಾಮ ಅಥವಾ ವಾರ್ಡ್‌ನಲ್ಲಿ ನೀರಿನ ಕೊರತೆ ಉಂಟಾದರೆ ತಕ್ಷಣ ಸ್ಪಂದಿಸಿ ಸಮಸ್ಯೆ ಪರಿಹರಿಸಬೇಕು. ಜನರು ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ಬರಬಾರದು. ನೀರಿನ ಸಮಸ್ಯೆ ಕುರಿತು ಆರಂಭಿಸಿದ ಸಹಾಯವಾಣಿಯ ಬಗ್ಗೆ ದೊಡ್ಡ ಅಕ್ಷರಗಳಲ್ಲಿ ಎಲ್ಲ ಸಂಬಂಧಿಸಿದ ಕಚೇರಿಗಳಲ್ಲಿ ಸಹಾಯವಾಣಿ ಸಂಖ್ಯೆಯನ್ನು ಒಳಗೊಂಡ ಫಲಕಗಳನ್ನು ಹಾಕಬೇಕು. ಬೇಸಿಗೆ ಮುಗಿಯುವ ವರೆಗೂ ಎಲ್ಲ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕಾರ್ಯನಿರ್ವಹಿಸಬೇಕು ಎಂದು ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕುಡಿಯುವ ನೀರಿನ ಪೂರೈಕೆಗಾಗಿ ಸರ್ಕಾರದಿಂದ ಗ್ರಾಮೀಣ ಪ್ರದೇಶಕ್ಕೆ ರೂ. 1.50 ಕೋಟಿ, ನಗರ ಪ್ರದೇಶಗಳಿಗೆ ರೂ. 90 ಲಕ್ಷಗಳನ್ನು ಮೀಸಲಿಡಲಾಗಿದೆ. ಅನುದಾನದ ಕೊರತೆ ಇಲ್ಲ. ಆದ್ದರಿಂದ ನಿಯೋಜಿತ ನೋಡಲ್ ಅಧಿಕಾರಿಗಳು ಹಾಗೂ ತಹಶೀಲ್ದಾರ ಮತ್ತು ಇಒ ಗಳು ಖುದ್ದು ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ನಂತರ ಗ್ರಾಮಗಳ ಸಮಸ್ಯೆಗಳ ಪಟ್ಟಿಯೊಂದಿಗೆ ಸಂಬಂಧಿಸಿದ ಶಾಸಕರೊಂದಿಗೆ ಟಾಸ್ಕ್ ಫೋರ್ಸ್ ಸಭೆ ನಡೆಸಬೇಕು. ನಂತರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು. ಈ ವಾರದೊಳಗೆ ಕಡ್ಡಾಯವಾಗಿ ಟಾಸ್ಕ್‌ಫೋರ್ಸ್ ಸಭೆ ನಡೆಸಬೇಕು ಎಂದು ಅವರು ಹೇಳಿದರು.

ಅಮೃತ 2.0 ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದ ಸಚಿವರು, ಯೋಜನೆ ಕಾರ್ಯಗತಗೊಳಿಸುವಲ್ಲಿ ವಿಳಂಬವಾಗದಂತೆ ಗಮನ ಹರಿಸಬೇಕು ಎಂದು ಸೂಚಿಸಿದರು. ನಗರ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆ ಯನ್ನು ಹೆಚ್ಚಿಸಲು ಈ ಯೋಜನೆ ಅತ್ಯಂತ ಪ್ರಮುಖವಾಗಿದ್ದು, ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಅಮೃತ 2.0 ಯೋಜನೆ ಜನರ ಜೀವನಮಟ್ಟವನ್ನು ಸುಧಾರಿಸುವ ಮಹತ್ವದ ಯೋಜನೆ. ಇದರ ಪ್ರಯೋಜನಗಳು ಶೀಘ್ರದಲ್ಲೇ ಜನರಿಗೆ ತಲುಪುವಂತೆ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪ ವಿಭಾಗಾಧಿಕಾರಿ ಕ್ಯಾ. ಮಹೇಶ ಮಾಲಗಿತ್ತಿ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಎಲ್ಲ ತಾಲ್ಲೂಕುಗಳ ತಹಶೀಲ್ದಾರರು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

---

### ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವ

## ಭಕ್ತರ ಆರೋಗ್ಯ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಿ - ಡಾ. ಇಟ್ನಾಳ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,ಏ.28-**ಶ್ರೀ ಕ್ಷೇತ್ರ ಹುಲಿಗಿಯ ಶ್ರೀ ಹುಲಿ ಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವದ ಅಂಗ ವಾಗಿ ಬರುವ ಭಕ್ತರ ಆರೋಗ್ಯ ರಕ್ಷಣೆ ಗಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆ ಮಾಡಿ ಶುದ್ಧ ನೀರನ್ನು ಮಾತ್ರ ಭಕ್ತಾದಿಗಳಿಗೆ ಕುಡಿಯಲು ನೀರು ಒದಗಿಸಲು ಅನುಕೂಲ ಮಾಡಿಕೊಡಬೇಕು. ಜಾತ್ರೆ ಪ್ರಾರಂಭವಾಗುವ ಪೂರ್ವದಲ್ಲಿ ಹಾಗೂ ಜಾತ್ರಾ ನಂತರ ಗ್ರಾಮದ ವ್ಯಾಪ್ತಿಗೆ ಬರುವ ಮತ್ತು ದೇವಸ್ಥಾನದ ವ್ಯಾಪ್ತಿಗೆ ಬರುವ ಎಲ್ಲಾ ಚರಂಡಿಗಳನ್ನು ದೇವಸ್ಥಾನದ ವತಿಯಿಂದ ಸ್ವಚ್ಛಗೊಳಿಸಿ ಕ್ಲೀಚಿಂಗ್ ಪೌಡರ್ ಹಾಕಲು ನಿರ್ಣಯಿಸಲಾಯಿತು. ನೀರಿನ ಟ್ಯಾಂಕ್‌ಗಳಿಗೆ ಕ್ಲೀಚಿಂಗ್ ಪೌಡರ್ ಹಾಕಿ ಸ್ವಚ್ಛಗೊಳಿಸಲು, ಜಾತ್ರಾ ವೇಳೆ ಸೊಳ್ಳೆಗಳ ನಿಯಂತ್ರಣಕ್ಕಾಗಿ ದೇವಸ್ಥಾನದ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೊಳಚೆ ನೀರು ನಿಲ್ಲದಂತೆ ಮುಂಜಾಗ್ರತೆ ವಹಿಸಲು ಇತ್ತೀಚೆಗೆ ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಪ್ರತಿ ನಿತ್ಯ ದಾಸೋಹ ಭವನದಲ್ಲಿ ಸಾರ್ವಜನಿಕರಿಗೆ ಹಾಗೂ ಭಕ್ತಾದಿಗಳಿಗೆ ತಯಾರಿಸಲಾಗುವ ಆಹಾರಗಳ ಪರಿಶೀಲನೆ ಮಾಡಲು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಹಾಗೂ ಜಿಲ್ಲಾ ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಬೇಕು. ಜಾತ್ರಾ ಅವಧಿಗೆ ಬೇಕಾಗುವ ಕ್ಲೀಚಿಂಗ್ ಪೌಡರ್, ಫಿನಾಯಿಲ್‌ನ್ನು ದೇವಸ್ಥಾನದ ವತಿಯಿಂದ ಖರೀದಿಸಿ ಒದಗಿಸಬೇಕು.

ಆರೋಗ್ಯ ಇಲಾಖೆ ಯಿಂದ ಸಾಧ್ಯವಾದಷ್ಟು ಅತೀ ಹೆಚ್ಚಿನ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಸಿಬ್ಬಂದಿಗಳನ್ನು ಶ್ರೀ ಹುಲಿಗೆಮ್ಮ ದೇವಿ ದೇವಾಲಯಕ್ಕೆ ನಿಯೋಜಿಸಲು ಹಾಗೂ ಈ ಸೇವೆಯನ್ನು 5 ದಿನಗಳ ಕಾಲ ನಿರಂತರ ಸೇವೆ ಒದಗಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಹುಲಿಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ಜಿಲ್ಲಾ ಆಹಾರ ಸುರಕ್ಷತಾ ಅಧಿಕಾರಿಗಳು ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಅವಧಿಯಲ್ಲಿ ಜಾತ್ರೆಗೆ ಬರುವ ಭಕ್ತರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಭಕ್ತರ ಆರೋಗ್ಯ ರಕ್ಷಣೆಗಾಗಿ ಬೇಕಾದ ಔಷದಿಗಳೊಂದಿಗೆ ಎರಡು ತಾತ್ಕಾಲಿಕ ಆರೋಗ್ಯ ಕೇಂದ್ರ, ಮುನಿರಾಬಾದ್ ಡ್ಯಾಂನಲ್ಲಿ ಒಂದು ತುರ್ತು ಚಿಕಿತ್ಸಾ ಘಟಕ ಮತ್ತು ಎರಡು ಆಂಬುಲೆನ್ಸ್ ವ್ಯವಸ್ಥೆ ಮಾಡಿಕೊಳ್ಳವುದಾಗಿ ಇತ್ತೀಚೆಗೆ ನಡೆದ ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿಗಳು ತಿಳಿಸಿದರು.

---

## 2027ರ ವೇಳೆಗೆ ಬಳ್ಳಾರಿ ಜಿಲ್ಲೆಯನ್ನು ಮಲೇರಿಯಾ ಮುಕ್ತವಾಗಿಸಲು ಸಂಕಲ್ಪ ಮಾಡೋಣ - ಡಾ.ಮರಿಯಂಬಿ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,ಏ.28-**ಮಲೇರಿಯಾ ಅಂತ್ಯಗೊಳಿಸಲು ಸಂಕಲ್ಪ ಮಾಡೋಣ; ಇದು ನಮ್ಮಿಂದ ಸಾಧ್ಯವಿದೆ ಎಂಬ ಘೋಷವಾಕ್ಯದೊಂದಿಗೆ ಜಿಲ್ಲೆಯನ್ನು 2027ರ ವೇಳೆಗೆ ಮ ಲೇರಿಯಾ ಮುಕ್ತಗೊಳಿಸಲು ಸಾರ್ವಜನಿ ಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಜಿಲ್ಲಾ ವಿಬಿ ಡಿಸಿ ಅಧಿಕಾರಿಗಳಾದ ಡಾ. ಮರಿಯಂಬಿ ವಿ.ಕೆ ಅವರು ಹೇಳಿದರು.




ವಿಶ್ವ ಮಲೇರಿಯಾ ದಿನಾಚರಣೆ-2026ರ ಅಂಗವಾಗಿ ಸೋಮವಾರ ನಗರದ ಬಂಡಿಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಉದ್ಘಾಟನಾ ಕಾರ್ಯಕ್ರಮ ಹಾಗೂ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮಲೇರಿಯಾ ಪ್ಲಾಸ್ಮೋಡಿಯಂ ಎಂಬ ಪರಾವಲಂಬಿ ಸೂಕ್ಷ್ಮ ಜೀವಿಯಿಂದ ಉಂಟಾಗುತ್ತದೆ. ಇದು ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆ ಯಿಂದ ಹರಡುತ್ತದೆ. ಚಳಿ, ನಡುಕ, ಬಿಟ್ಟು ಬಿಟ್ಟು ಬರುವ ಜ್ವರ, ವಾಕರಿಕೆ ಮತ್ತು ಮೈ ಬೆವರುವುದು ಈ ರೋಗದ ಪ್ರಮುಖ ಲಕ್ಷಣಗಳಾಗಿವೆ. ಹಾಗಾಗಿ ಯಾವುದೇ ರೀತಿಯ ಜ್ವರವಿದ್ದರೂ ತಕ್ಷ ಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ರಕ್ತ ಪರೀಕ್ಷೆ ಮಾಡಿಸಿ ಕೊಂ ಡು ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ಮನೆಯ ಸುತ್ತಮುತ್ತ ಇಲಾಖೆ ವತಿಯಿಂದ ನಡೆಸುವ ಕೀಟನಾಶಕ ಸಿಂಪರಣೆಗೆ ಸಹಕರಿಸುವುದು. ಮಲಗುವಾಗ ಕಡ್ಡಾಯವಾಗಿ ಸೊಳ್ಳೆ ಪರದೆ ಬಳಸುವುದು ಮತ್ತು ಕಿಟಕಿಗಳಿಗೆ ಜಾಲರಿ ಅಳವಡಿಸುವುದು. ನೀರು ನಿಲ್ಲುವ ಸ್ಥಳಗಳಲ್ಲಿ ಲಾರ್ವಹಾರಿ ಗಪ್ಪಿ ಮತ್ತು ಗಂಬೂ ಷಿಯಾ ಮೀನುಗಳನ್ನು ಬಿಡುವ ಮೂಲಕ ಸೊಳ್ಳೆಗಳ ಉತ್ಪತ್ತಿ ತಡೆಯುವುದು ಸೇರಿದಂತೆ ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕಾರ್ಯಗಳಿಗೆ ಸಹಕರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಿಬಿಡಿಸಿ ಸಮಾಲೋಚಕ ಪ್ರತಾಪ್.ಹೆದ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ವೇದಿಕೆಯಲ್ಲಿ ಬಂಡಿಹಟ್ಟಿ ವೈದ್ಯಾಧಿಕಾರಿಗಳಾದ ಡಾ.ಯಾಸ್ಮಿನ್, ಡಾ.ಫಾಮಿದಾ ಭಾನು, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾಗೇಂದ್ರಪ್ಪ, ಮರಿಬಸವನಗೌಡ, ನಾಗರಾಜ್, ಬಾಬು ರಾವ್ ಹಾಗೂ ಬಳ್ಳಾರಿ ತಾಲ್ಲೂಕಿನ ಆರೋಗ್ಯ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು ಜಾಗೃತಿ ಜಾಥಾ ದಲ್ಲಿ ಪಾಲ್ಗೊಂಡು ಸಾರ್ವ 1ಜನಿಕರಲ್ಲಿ ಅರಿವು ಮೂಡಿಸಿದರು.

---

## ಮರಾಠಾ ಸಮಾಜದಿಂದ ಇಂದು ಅಂಬೇಡ್ಕರ್ ಜಯಂತ್ಯುತ್ಸವ

ಕನ್ನಡ ಮಾತೃ ಭೂಮಿ ವಾರ್ತೆ

**ಬೀದರ್, ಏ.28-**ಈ ತಿಂಗಳ 29ರಂದು ಸಾಯಂಕಾಲ 5 ಗಂಟೆಗೆ ನಗರದ ಅಂಬೇಡ್ಕರ್ ಹಾಗೂ ಛತ್ರಪತಿ ಶಿವಾಜಿ ಮಹಾರಾಜ ವೃತ್ತದ ಮಧ್ಯದಲ್ಲಿನ ರಸ್ತೆಯಲ್ಲಿ ಬೃಹತ್ ವೇದಿಕೆ ನಿರ್ಮಿಸಿ ಅಲ್ಲಿ ಸಂವಿಧಾನ ಶಿಲ್ಪಿ ಡಾ.ಭೀಮರಾವ ಅಂಬೇಡ್ಕರ್ ಅವರ ಜಯಂತ್ಯೋತ್ಸವ ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದೆಂದು ಸಮಾಜದ ಪೂಜ್ಯರಾದ ದಾದಾ ಮಹಾರಾಜ್ ನಗರಕರ್ ಅವರು ತಿಳಿಸಿದರು.



ಭಾನುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹರಿದು ಹಂಚಿ ಹೋಗುತ್ತಿರುವ ಸಣ್ಣ ಸಣ್ಣ ಸಮಾಜಗಳನ್ನು ಒಂದು ಗೋಡಿಸುವುದು. ದಲಿತ ಸಮುದಾಯ ಹಾಗೂ ಮರಾಠಾ ಸಮುದಾಯಗಳನ್ನು ಒಗ್ಗೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಮರಾಠಾ ಸಮಾಜದಿಂದ ಅಂಬೇಡ್ಕರ್ ಜಯಂತಿ ಆಚರಿಸುತ್ತ ಬರುತ್ತಲಿದ್ದೇವೆ. ಈ ಮೊದಲು ಮಹಾರಾಷ್ಟ್ರದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದೇವು. ಈ ವರ್ಷದಿಂದ ಕರ್ನಾಟಕದಲ್ಲಿಯೂ ಸಹ ಸಯ್ಯಾಜಿರಾವ ಗಾಯಕವಾಡ ಹಾಗೂ ಶಾಹೂ ಮಹಾರಾಜರ ತತ್ವಗಳನ್ನು ನಮ್ಮ ಸಮುದಾಯಕ್ಕೆ ಪರಿಚಯಿಸುವ ಕಾರ್ಯ ಮಾಡಬೇಕಾದ ಹಿನ್ನೆಲೆ ಈ ಕಾರ್ಯಕ್ರಮ ಸೂಕ್ತವಾಗಿದೆ ಎಂದರು.

ಅಣದೂರ ವೈಶಾಲಿ ನಗರದ ಭಂತೆ ಸಂಘರಕ್ಷಿತ ಅವರು ಮಾತನಾಡಿ, ಅಂಬೇಡ್ಕರ್ ಅವರು ಒಂದು ಸಮುದಾಯದ ಆಸ್ತಿ ಅಲ್ಲ ಅವರು ಸರ್ವ ಸಮುದಾಯದ ಬೆಳಕು. ಹಾಗಾಗಿ ಪರಸ್ಪರ ಸಮುದಾಯಗಳು ಸಾಮೂಹಿಕವಾಗಿ ಸೇರಿ ಇಂಥ ಮಹಾತ್ಮರ ಜಯಂತಿಗಳನ್ನು ಆಚರಿಸುತ್ತ ಬಂದರೆ ಧರ್ಮ ರಹಿತ, ಜಾತಿರಹಿತದಿಂದ ಕೂಡಿದ ಸಮಾಜ ಸಂಘಟಿಸಬಹುದಾಗಿದೆ ಎಂದರು.

ನ್ಯಾಯವಾದಿ ನಾರಾಯಣ ಗಣೇಶ ಅವರು ಮಾತನಾಡಿ, ಈ ಕಾರ್ಯಕ್ರಮವನ್ನು ಉದ್ಘಾಟಿಸಲು ಕಾರ್ಮಿಕ ಸಚಿವ ಸಂತೋಷ ಲಾಡ್ ಆಗಮಿಸುತ್ತಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಮ್ ಖಾನ್, ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರನ್ನು ಕಾರ್ಯಕ್ರಮಕ್ಕೆ ಅಹ್ವಾನಿಸಲಾಗುತ್ತಿದೆ. ಒಟ್ಟಾರೆ ಇದೊಂದು ಸರ್ವಧರ್ಮದ ಶಾಂತಿಯ ತೋಟ ಎಂಬಂತೆ ಎಲ್ಲ ಪಕ್ಷದವರನ್ನು ಸಹ ಕಾರ್ಯಕ್ರಮಕ್ಕೆ ಅಹ್ವಾನಿಸಿ ರಾಜಕೀಯ ರಹಿತ ಕಾರ್ಯಕ್ರಮವನ್ನಾಗಿ ಮಾಡಲಾಗುತ್ತದೆ ಎಂದರು.

ಲಿಡ್ಕರ್ ಬೋರ್ಡ್ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಮಾತನಾಡಿ, ಸಂತೋಷ ಲಾಡ್ ಅವರು ಪ್ರತಿಯೊಂದು ಜಿಲ್ಲೆಗಳಲ್ಲಿ ಇಂತಹ ಧರ್ಮಾಧಾರಿತ, ಜಾತಿ ರಹಿತ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಗಡಿ ಜಿಲ್ಲೆ ಬೀದರ್‌ನಲ್ಲಿ ಸಹ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ದಲಿತ ಮುಖಂಡರಾದ ಮಹೇಶ ಗೋರನಾಳಕರ್, ಬಾಬುರಾವ್ ಪಾಸ್ವಾನ್, ಮರಾಠಾ ಸಮಾಜದ ಗೋವಿಂದರಾವ್ ಜಾಧವ, ಭೋವಿ ವಡ್ಡರ್ ಸಮಾಜದ ಅಧ್ಯಕ್ಷ ತಾನಾಜಿ ಸಗರ್, ಡಾ. ಕಾಶಿನಾಥ ಚಲ್ವಾ, ಧನರಾಜ್ ಮುಸ್ತಾಪುರೆ ಮುಂತಾದವರು ಉಪಸ್ಥಿತರಿದ್ದರು.

---

## ಗ್ರಾ.ಪಂ. ಚುನಾಯಿತ ಸದಸ್ಯರ ಸ್ಥಾನಗಳ ಪ್ರಕಟ : ಆಕ್ಷೇಪಣೆ ಅರ್ಜಿಗೆ ಅವಕಾಶ

ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಏ.28-**

ಯಾದಗಿರಿ ವಿವಿಧ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸ್ಥಾನಗಳನ್ನು ಪ್ರಕಟಿಸಲಾಗಿದ್ದು, ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದಿಂದ ಅದಾಲತ್ ವೇಳಾಪಟ್ಟಿಯನ್ನು ವಿಸ್ತರಿಸಿದೆ ಎಂದು ಯಾದಗಿರಿ ತಹಶಿಲ್ದಾರರು ಅವರು ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸ್ಥಾನಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 5(1) ರಂತೆ ನಿಗದಿಪಡಿಸಲಾಗಿದೆ. ಆಯೋಗದ ವೆಬ್ ಸೈಟ್ ವಿಳಾಸ; https://rdpr.karnataka.gov.in/rdc/public/ ದಿನಾಂಕ : 2026ರ ಏಪ್ರಿಲ್ 18 ರಂದು ರಾಜ್ಯ ಪತ್ರದಲ್ಲಿ (ರಾಜ್ಯ ಪತ್ರದ ವಿಳಾಸ : https://erajyapatra.karnataka.gov.in ನಲ್ಲಿ ಪ್ರಕಟಿಸಲಾಗಿದೆ.

ಈ ಸದಸ್ಯ ಸ್ಥಾನಗಳ ಪ್ರಕಟಣೆ ಕುರಿತಂತೆ 2026ರ ಮೇ 2ರ ಒಳಗೆ ರೊಳಗಾಗಿ ಆಯೋಗದ ವೈಬ್ ಸೈಟ್ ವಿಳಾಸ: https://rdpr.karnataka.gov.in/rdc/public/ ನಲ್ಲಿ ಅಥವಾ ಖುದ್ದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗೇಟ್ ನಂ.2, 2ನೇ ಮಹಡಿ, ಕೋಟಡಿ ಸಂಖ್ಯೆ:229, 230 ಬಹು ಮಹಡಿಗಳ ಕಟ್ಟಡ ಬೆಂಗಳೂರು ಇವರ ಕಚೇರಿಯಲ್ಲಿ ಮಾತ್ರ ಸಲ್ಲಿಸಲು ಅವಕಾಶವಿದ್ದು, ಈ ವಿಷಯದ ಕುರಿತು 2026ರ ಮೇ 2ರ ಒಳಗೆ ಸ್ವೀಕೃತವಾದ ಆಕ್ಷೇಪಣೆ ಹಾಗೂ ಅಹವಾಲುಗಳ ಪರಿಶೀಲನಾ ಅದಾಲತ್ 2026ರ ಮೇ 5 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30ರ ವರೆಗೆ ನಡೆಯಲಿದೆ. ಅದಾಲತ್‌ನಲ್ಲಿ ಭಾಗವಹಿಸಲು ಇಚ್ಚಿಸಿದ್ದಲ್ಲಿ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಗುರುತಿನ ಚೀಟಿಯ ಮೂಲ ಪ್ರತಿಯನ್ನು ಕಡ್ಡಾಯವಾಗಿ ತರಕದ್ದು, ಎಂಬ ಮಾಹಿತಿಯನ್ನು ಹಾಗೂ ಯಾದಗಿರಿ ತಾಲೂಕು ಗ್ರಾಮ ಪಂಚಾಯಿತಿಗಳಾದ ಠಾಣಗುಂದಿ 19, ಅರಕೇರಾ (ಬಿ)-22, ಮುದ್ನಾಳ-18, ಯರಗೋಳ-22, ಅಲ್ಲಿಪೂರ-25, ಹತ್ತಿಕುಣಿ- 23, ಬಂದಳ್ಳಿ-22, ಹೊನಗೇರಾ-25, ಮುಂಡರಗಿ-24, ರಾಮಸಮುದ್ರ- 23, ಅರಕೇರಾ (ಕೆ)- 14, ವರ್ಕನಳ್ಳಿ- 21, ಹಳಿಗೇರಾ- 15, ಕೌಳೂರ- 21, ಮಲ್ಹಾರ- 15, ಬಳಿಚಕ್ರ- 22, ಬಾಡಿಯಾಲ-17, ಬೆಳಗುಂದಾ-14, ಕಡೇಚೂರ- 25, ಕಿಲ್ಲನಕೇರಾ- 22, ಸೈದಾಪೂರ- 25, ಮೋಟ್ನಳ್ಳಿ-25 ಚುನಾಯಿತ ಸದಸ್ಯರ ಸ್ಥಾನಗಳನ್ನು ಪ್ರಕಟಿಸಿದೆ. ಯಾದಗಿರಿ ತಾಲೂಕು ಗ್ರಾಮ ಪಂಚಾಯತ ಒಟ್ಟು 459 ಸದಸ್ಯರು ಸ್ಥಾನ ಇರುತ್ತವೆ.

ಚುನಾಯಿತ ಸದಸ್ಯರ ಸ್ಥಾನಗಳನ್ನು ಪ್ರಕಟಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## ಎಸ್‌ಎಸ್‌ಎಲ್‌ಸಿ : ಸರಕಾರಿ ಬಾಲಕರ ಬಾಲಮಂದಿರದ ವಿದ್ಯಾರ್ಥಿಗಳ ಸಾಧನೆ

**ಪ್ರಜಾ ಪ್ರಸಿದ್ಧ ವಾರ್ತೆ ಕೊಪ್ಪಳ,ಏ.27-**

2025-26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಏಪ್ರಿಲ್ 23ರಂದು ಪ್ರಕಟಗೊಂಡಿದ್ದು, ಕೊಪ್ಪಳದ ಸರಕಾರಿ ಬಾಲಕರ ಬಾಲಮಂದಿರದ ನಿವಾಸಿ ಮಕ್ಕಳು ಉತ್ತಮ ಅಂಕಗಳನ್ನು ಪಡೆದು ಉತ್ತೀರ್ಣರಾಗಿರುತ್ತಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ ಅವರು ತಿಳಿಸಿದ್ದಾರೆ.

ಸರಕಾರಿ ಬಾಲಕರ ಬಾಲಮಂದಿರದ ವಿದ್ಯಾರ್ಥಿ ಶ್ರೀನಿವಾಸ ಕನ್ನಡ ವಿಷಯದಲ್ಲಿ 105 ಅಂಕಗಳು, ಇಂಗ್ಲಿಷ್‌ನಲ್ಲಿ 55, ಆಟೋವೆ ಮೊಬೈಲ್ 89 ಅಂಕಗಳು, ಗಣಿತದಲ್ಲಿ 67, ವಿಜ್ಞಾನದಲ್ಲಿ 78 ಮತ್ತು ಸಮಾಜ ವಿಷಯದಲ್ಲಿ 64 ಅಂಕಗಳು ಸೇರಿ ಒಟ್ಟು 458 ಅಂಕಗಳನ್ನು ಪಡೆದು ಶೇಕಡಾ 70.46 ಫಲಿತಾಂಶವನ್ನು ಪಡೆದಿದ್ದಾನೆ.

ಹಾಗೆಯೇ ಇನ್ನೋರ್ವ ವಿದ್ಯಾರ್ಥಿ ಗೌತಮರಾಜ ಕನ್ನಡದಲ್ಲಿ 93, ಇಂಗ್ಲಿಷ್ 46, ಆಟೋವೆ ಮೊಬೈಲ್ 83, ಗಣಿತ 53, ವಿಜ್ಞಾನ 68 ಹಾಗೂ ಸಮಾಜ 67 ಅಂಕಗಳು ಸೇರಿ ಒಟ್ಟು 410 ಅಂಕಗಳನ್ನು ಪಡೆದು ಶೇಕಡಾ 63.08 ಫಲಿತಾಂಶವನ್ನು ಪಡೆದಿರುತ್ತಾನೆ.

---

## ಹೊಂಡದಲ್ಲಿ ಮುಳುಗಿ ಬಾಲಕ ಮೃತ್ಯು

ಕನ್ನಡ ಮಾತೃ ಭೂಮಿ ವಾರ್ತೆ

**ಸುರಪುರ,ಏ.28-** ತಾಲೂಕಿನ ಚೌಡೇಶ್ವರಿಹಾಳ ಗ್ರಾಮದ ಕೃಷ್ಣಾ ನದಿ ತೀರದಲ್ಲಿ ಮರಳು ತೆಗೆದಿದ್ದರಿಂದ ನಿರ್ಮಾಣ ಗೊಂಡ ಹೊಂಡದಲ್ಲಿ ಮುಳುಗಿ 15 ವರ್ಷದ ಬಾಲಕ ಮೃತಪಟ್ಟಿರುವ ಘಟನೆ ನಡೆದಿದೆ.

ಮೃತ ಬಾಲಕನನ್ನು ಶರಣಬಸವ ಎಂದು ಗುರುತಿಸಲಾಗಿದೆ. ಕುರಿಗಳಿಗೆ ನೀರು ಕುಡಿಸಲು ಹೋಗಿದ್ದ ವೇಳೆ ಹೊಂಡದಲ್ಲಿದ್ದ ನೀರಿಗೆ ಜಾರಿ ಬಿದ್ದು ಮುಳುಗಿದ್ದಾನೆ ಎನ್ನಲಾಗಿದೆ.

ಘಟನೆಯ ಮಾಹಿತಿ ತಿಳಿದ ಕೂಡಲೇ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಸ್ಥಳಕ್ಕೆ ಧಾವಿಸಿ ಈಜುಗಾರರ ಸಹಾಯದಿಂದ ಹುಡುಕಾಟ ನಡೆಸಿದರು.

ಹಲವು ಗಂಟೆಗಳ ಪರಿಶ್ರಮದ ನಂತರ ಬಾಲಕನ ಮೃತದೇಹ ಪತ್ತೆಯಾಗಿದೆ ಎಂದು ತಿಳಿದು ಬಂದಿದೆ.

ಈ ಘಟನೆಗೆ ಅಕ್ರಮ ಮರಳುಗಾರಿಕೆ ಕಾರಣ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮರಳು ತೆಗೆದು ಬಿಟ್ಟ ಹೊಂಡವೇ ಈ ಅವಘಡಕ್ಕೆ ಕಾರಣವಾಗಿದೆ ಎಂದು ಆರೋಪಿಸಿದ್ದಾರೆ.

ಘಟನೆಯ ಕುರಿತು ನಿಖರ ಕಾರಣ ಪೊಲೀಸರು ತನಿಖೆ ನಡೆಸಿದ ಬಳಿಕವೇ ತಿಳಿದು ಬರಲಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ

ಪರಿಶೀಲನೆ ನಡೆಸಿದ್ದು, ಸುರಪುರ ಪೊಲೀಸ್ ಠಾಣಾ ವ್ಯಾಪ್ತಿಯ ಲ್ಲಿ ಘಟನೆ ನಡೆದಿದ್ದು, ಇನ್ನೂ ದೂರು ದಾಖಲಾಗಿಲ್ಲ ಎಂದು ತಿಳಿದು ಬಂದಿದೆ.

---

## ಭೀಮಳ್ಳಿಯಲ್ಲಿ ಸಹೋದರರ ಮೇಲೆ ಮಾರಣಾಂತಿಕ ಹಲ್ಲೆ: ಸೈಯದ್ ಸಹೋದರರ ವಿರುದ್ಧ ಎಫ್‌ಐಆರ್

ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ, ಏ.28-**ಸಾರ್ವಜನಿಕ ರಸ್ತೆಯಲ್ಲಿ ಓಡಾಡು ವಾಗ ತಾಳ್ಮೆ ಇರಬೇಕು ಎನ್ನುವುದು ನಾಗರಿಕ ನಿಯಮ. ಆದರೆ, ಇಲ್ಲಿ ತಾಳ್ಮೆ ಯ ಮಾತು ಹಾಗಿರಲಿ, ದಾರಿ ಬಿಡಿ ಎಂದು ಕೇಳಿದ್ದಕ್ಕೇ ರಸ್ತೆ ರಣರಂಗವಾ ಗಿದೆ! ಆಟೋ ಸೈಡಿಗೆ ಸರಿಸುವಂತೆ ಕೋರಿದ ಸಹೋದರರ ಮೇಲೆ ಸೈಯದ್ ಜಮೀರ್ ಹಾಗೂ ಆತನ ಸೋದರರು ಅಮಾನವೀಯವಾಗಿ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಭೀಮಳ್ಳಿ ಗ್ರಾಮದಲ್ಲಿ ಸಂಭವಿಸಿತ್ತು. ಈಗ ಹಲ್ಲೆಕೋರರ ವಿರುದ್ಧ ಪ್ರಕರಣ ದಾಖಲಾಗಿದೆ.



ನಾಲವಾರ ಗ್ರಾಮದ ನಿವಾಸಿಗಳಾದ ತೋಟೇಂದ್ರ ಮತ್ತು ಸುನಿಲ್ ಎಂಬ ಸಹೋದರರು ತಮ್ಮ ತಂಗಿಯನ್ನು ಆಕೆಯ ಗಂಡನ ಮನೆಯಾದ ಭೀಮಳ್ಳಿಗೆ ಬಿಡಲು ಕಾರಿನಲ್ಲಿ ಹೋಗಿದ್ದರು. ತಂಗಿಯನ್ನು ಮನೆಯಲ್ಲಿ ಬಿಟ್ಟು ವಾಪಸ್ ಹೊರಡುವಾಗ, ರಸ್ತೆಯ ಮಧ್ಯದಲ್ಲೇ ಆಟೋಗಳನ್ನು ಅಡ್ಡಲಾಗಿ ನಿಲ್ಲಿಸಲಾಗಿತ್ತು. ನಮ್ಮ ಕಾರು ಹೋಗಲು ತೊಂದರೆಯಾಗುತ್ತಿದೆ, ಸ್ವಲ್ಪ ಆಟೋ ಸೈಡ್‌ಗೆ ಸರಿಸಿ ಎಂದು ಸಹೋದರರು ವಿನಂತಿಸಿದ್ದಾರೆ. ಇಷ್ಟೇ ಹೇಳಿದ್ದಕ್ಕೆ ರೊಚ್ಚಿಗೆದ್ದ ಆಟೋ ಮಾಲೀಕ ಸೈಯದ್ ಜಮೀರ್ ಹಾಗೂ ಆತನ ಸೋದರರು ಮೃಗಗಳಂತೆ ವರ್ತಿಸಿದ್ದಾರೆ.ದೊಣ್ಣೆ ಹಿಡಿದು ಮುಗಿಬಿದ್ದರು. ಸೈಯದ್ ಜಮೀರ್ ಜೊತೆಗೂಡಿದ ಸೈಫಾಬ್ ಒಂಟಿ, ಆರಿಫ್, ಆಸಿಫ್ ಮತ್ತು ಇಮ್ರಾನ್ ಎಂಬುವವರು ಕಟ್ಟಿಗೆ ಹಾಗೂ ದೊಣ್ಣೆಗಳಿಂದ ತೋಟೇಂದ್ರ ಮತ್ತು ಸುನಿಲ್ ಮೇಲೆ ಮನಬಂದಂತೆ ಹಲ್ಲೆ ನಡೆಸಿದ್ದಾರೆ.

ಕೇವಲ ಪುರುಷರ ಮೇಲೆ ಮಾತ್ರವಲ್ಲದೆ, ಗಲಾಟೆ ಬಿಡಿಸಲು ಬಂದ ತಾಯಿ ಮತ್ತು ಪುಟ್ಟ ಮಕ್ಕಳ ಮೇಲೆಯೂ ಈ ಕಿರಾತಕರು ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ. ನಿಮ್ಮನ್ನು ಈ ಊರಿನಿಂದ ಜೀವಂತವಾಗಿ ಹೋಗಲು ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿದ್ದಾರೆಂದು ಸಂತ್ರಸ್ತರು ದೂರಿನಲ್ಲಿ ಅಳಲು ತೋಡಿಕೊಂಡಿದ್ದಾರೆ. ಹಲ್ಲೆಗೊಳಗಾದ ಕುಟುಂಬಸ್ಥರು ನಗರದ ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಸೈಯದ್ ಜಮೀರ್ ಮತ್ತು ಸಹೋದರರ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

# ಗೋಮಾತೆಗೆ ಗೌರವದ ಜೊತೆ ರಕ್ಷಣೆ ಕೊಡಿ



■ ಕನ್ನಡ ಮಾತೃ ಭೂಮಿ ವಾರ್ತೆ

**ಕನಕಗಿರಿ,ಏ.28**–ಪಟ್ಟಣದ ಸೋಮವಾರ ರೈತ ಪರ ಸಂಘಟನೆಗಳು ಮತ್ತು ಹಿಂದೂ ಜಾಗರಣ ವೇದಿಕೆಗಳಿಂದ ಗೋಮಾತೆಗೆ ಸಂಬಂಧಿಸಿದಂತೆ ಕಾನೂನುಗಳನ್ನ ಜಾರಿಗೆ ಗೊಳಿಸುವಂತೆ ಮಾನವಿ ಸಲ್ಲಿದರು .

ಭಾರತದ ಸಂವಿಧಾನದ ಚೌಕಟ್ಟಿನೊಳಗೆ ಕೇಂದ್ರ ಸರ್ಕಾರ ಮತ್ತು ಎಲ್ಲಾ ರಾಜ್ಯ ಸರ್ಕಾರಗಳೊಂದಿಗೆ ಗೋಮಾತೆಯು ಅತ್ಯುನ್ನತ ಮಟ್ಟದ ಸೇವೆ ಸಂಶೋಧನೆ ಮತ್ತು ಅನುದಾನಗಳನ್ನು ಪಡೆಯುವುದು ಖಚಿತಪಡಿಸಿಕೊಳ್ಳಬೇಕು. ರಕ್ಷಣೆ ಮತ್ತು ಭದ್ರತೆ ಒದಗಿಸಿ ಭಾರತದಿಂದ ಗೋ ಹತ್ಯೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಿ ಗೌರವ ಗೋಮಾತೆಗೆ ರಾಷ್ಟ್ರೀಯ ತಾಯಿಯಂತೆ ನೋಡಬೇಕು ರಾಷ್ಟ್ರೀಯ ಆಸ್ತಿಯ ಮೂಲಭೂತ ಹಕ್ಕನ್ನು ನೀಡಬೇಕು ಅಲ್ಲದೇ ಕೃಷಿ ಮತ್ತು ಇತರ ಬಳಕೆಗಳಲ್ಲಿ ಗೋಮಾಯ ಮತ್ತು ಗೋ ಮೂತ್ರದ ಪ್ರಾಮುಖ್ಯತೆಯನ್ನು ಹೆಚ್ಚಿಸಲು ಕೃಷಿ ವಿಶ್ವವಿದ್ಯಾಲಯಗಳಲ್ಲಿ ಗೋ ಮಾಯ ಮತ್ತು ಗೋಮೂತ್ರದ ಕುರಿತು ದೊಡ್ಡ ಪ್ರಮಾಣದ ಸಂಶೋಧನೆ ನಡೆಸಬೇಕು

ಸರ್ಕಾರವು ಗೋವಿನ ಹಾಲು ಮೊಸರು ತುಪ್ಪ ಗೋ ಮಾಯೆ ಮತ್ತು ಗೋಮೂತ್ರವನ್ನು ಉತ್ತೇಜಿಸಬೇಕು ಇದಕ್ಕಾಗಿ ಸರಿಯಾದ ನೀತಿಗಳನ್ನು ರಚಿಸಬೇಕು ಆಯುರ್ವೇದ ಆಸ್ಪತ್ರೆಗಳಲ್ಲಿ ಪಂಚಗವ್ಯ ಔಷಧಿಗಳನ್ನು ಉಚಿತವಾಗಿ ವಿತರಿಸಬೇಕು ಗೋಮಾಹಿ ಗೋಮೂತ್ರವನ್ನು ಆಧರಿಸಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಬಯಸುವ ಉದ್ಯಮಿಗಳನ್ನು ಪ್ರೋತ್ಸಾಹಿಸಬೇಕು.ಸರ್ಕಾರಿ ನಿಯಂತ್ರಿತ ದೇವಾಲಯಗಳಲ್ಲಿ ನೈವೇದ್ಯ ಆರತಿ ಪೂಜೆ ಮತ್ತು ಪ್ರಸಾದಕ್ಕಾಗಿ ಕಡ್ಡಾಯವಾಗಿ ದೇಸಿ ಹಸುಗಳ ಹಾಲು ಮೊಸರು ಮತ್ತು ತುಪ್ಪವನ್ನು ಬಳಸಬೇಕು. ದೊಡ್ಡ ಶಾಪಿಂಗ್ ಮಾಲ್ ಗಳಲ್ಲಿ ಸಂಬಂಧಿಸಿದೆ ಹೈನುಗಾರಿಕೆ ಮತ್ತು ಗೋವಿನ ಸಗಣಿ ಕಡ್ಡಾಯವಾಗಿ ಕೌಂಟರ್ ರಚಿಸಬೇಕು. ಪ್ರತಿ ಊರಿನಲ್ಲಿ ಕೃಷಿ ಆಧಾರಿತ ರೈತರಿಗೆ ವಿಶೇಷ ಆರ್ಥಿಕ ನೆರವು ನೀಡಬೇಕು.

ರಾಜ್ಯಗದಲ್ಲಿ ಗೋಶಾಲೆಗಳಿಗೆ ಸಂಬಂಧ ಪಟ್ಟ ಎಲ್ಲಾ ಇಲಾಖೆಗಳಲ್ಲಿ ಅನುದಾನವನ್ನು ನೀಡಬೇಕು .ಪ್ರತಿ ಗ್ರಾಮ ಪಂಚಾಯಿತಿಗಳು ಗೋವುಗಳಿಗೆ ನಂದಿ ಶಾಲೆಯನ್ನು ಸ್ಥಾಪಿಸಬೇಕು. ಹೆಚ್ಚಿನ ದೀವಿಗೆ ಪಡೆಯುವ ಸರ್ಕಾರಿ ನಿಯಂತ್ರಿತ ದೇವಾಲಯಗಳಿಗೆ ಕಡ್ಡಾಯವಾಗಿ ಗೋಶಾಲೆಗಳನ್ನ ನಿರ್ಮಿಸಬೇಕು.

ಗೋ ಹತ್ಯೆ ಮತ್ತು ಗೋ ಕಳ್ಳ ಸಾಗಣೆಯಲ್ಲಿ ತೊಡಗಿರುವ ಅಪರಾಧಿಗಳಿಗೆ ಕಠಿಣ ಜೀವಾವಧಿ ಶಿಕ್ಷೆಯನ್ನು ನೀಡುವುದರ ಜೊತೆಗೆ ಸಾಗಾಣಿಯಲ್ಲಿ ಬಳಸುವ ವಾಹನಗಳನ್ನು ಜಾಮೀನು ಇಲ್ಲದಂತೆ ಕಾನೂನು ಮಾಡಬೇಕು. ಜಾತ್ರೆಗಳ ಹೆಸರಿನಲ್ಲಿ ಪ್ರಾಣಿಗಳ ಬಲಿ ನಿಲ್ಲಿಸುವುದರೊಂದಿಗೆ ಕಳ್ಳ ಸಾಗಣೆಯನ್ನು ನಿಯಂತ್ರಿಸಲು ಕೇಂದ್ರ ಕಾನೂನನ್ನು ರೂಪಿಸಬೇಕೆಂದು ಕನಕಗಿರಿ ತಹಸೀಲ್ದಾರ್ ಗೆ ಮನವಿ ಪತ್ರ ಸಲ್ಲಿಸಿದರು.

ಜಿಲ್ಲಾಮಟ್ಟದಲ್ಲಿ ಪ್ರತ್ಯೇಕ ಪಂಚಗವ್ಯ ಆಸ್ಪತ್ರೆಗಳನ್ನು ಸ್ಥಾಪಿಸಬೇಕು ನನ್ನದೇ ರೈತರು ಆಧಾರಿತ ನೈಸರ್ಗಿಕ ಕೃಷಿಯನ್ನ ಅಳವಡಿಸಿಕೊಂಡಾಗ ಮಾತ್ರ ಸ್ವಾವಲಂಬಿ ಭಾರತದ ಕನಸು ನನಸಾಗುತ್ತದೆ.

ಈ ಸಂದರ್ಭದಲ್ಲಿ ರೈತಪರ ಸಂಘಟನೆಯ ಅಧ್ಯಕ್ಷರು ಗಣೇಶ ರೆಡ್ಡಿ,ರಾಜ್ಯ ಕಾರ್ಯದರ್ಶಿ ಶ್ರೀನಿವಾಸ್ ಪೂಜಾರ, ಮಲ್ಲಮ್ಮ ಹೂಗಾರ್, ನೇತ್ರಾವತಿ ಗುರಿಕಾರ.ಯಂಕಮ್ಮ ಪೂಜಾರಿ,ಹುಲಿಗೆಮ್ಮ ಸೋಮಸಾಗರ, ಜ್ಯೋತಿ ಕುರುಬರ, ಕನಕ ರೆಡ್ಡಿ ಹಿಂದೂ ಜಾಗರಣ ವೇದಿಕೆಯ ಅಯ್ಯನಗೌಡ ರೆಡ್ಡಿ, ಹನುಮೇಶ್ ಗಂಗಾಮತ, ಸಂಪತ್ ಕುಮಾರ್, ಕಿರಣ್ ಕುಮಾರ್, ಈಶ್ವರ್ ಇನ್ನಿತರರು ಇದ್ದರು

# ಸರ್ಕಾರ ತಕ್ಷಣವೇ ರೈತರಿಗಾದ ಅನ್ಯಾಯವನ್ನು ಸರಿಪಡಿಸಬೇಕು
## ಪ್ರಜಾ ಪರಿವರ್ತನಾ ವೇದಿಕೆಯ ಸಿ ಆನಂದ್ ಕುಮಾರ್ ಆಗ್ರಹ



■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,ಏ.27**–ಕೆಐಎಡಿಬಿಯು ಜಿಂದಾಲ್ ಕಂಪನಿ ಜೊತೆ ಮಾಡಿಕೊಂಡಿರುವ ಕಾನೂನು ಬಾಹಿರ ರಿಯಲ್ ಎಸ್ಟೇಟ್ ಮಾರಾಟವನ್ನು ರದ್ದುಪಡಿಸಬೇಕು ಸುಪ್ರೀಂ ಕೋರ್ಟ್ ತೀರ್ಪಿನಂತೆ ಪರಿಹಾರ ಒದಗಿಸಿ ಕೈಗಾರಿಕೆಗಳನ್ನು ಸ್ಥಾಪಿಸಬೇಕು ಅಥವಾ ರೈತರಿಗೆ ಅವರ ಭೂಮಿಯನ್ನು ವಾಪಸು ಮಾಡಬೇಕು.

ಬೇಷರತ್ತಾಗಿ ಬಂಧಿತ ಎಲ್ಲಾ ರೈತ ಮುಖಂಡರು ಹಾಗೂ ರೈತರನ್ನು ಬಿಡುಗಡೆ ಗೊಳಿಸಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ತಕ್ಷಣ ಹೋರಾಟ ನಿರತರ ಜೊತೆ ಮಾತುಕತೆ ನಡೆಸಿ ಸೂಕ್ತ ಪರಿಹಾರವನ್ನು ರೂಪಿಸಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘ (ಒಕ್ಕಖ) ಕರ್ನಾಟಕ ರಾಜ್ಯ ಸಮಿತಿ ವತಿಯಿಂದ ನಡೆಸಲಾದ ಪ್ರತಿಭಟನೆಗೆ ಪ್ರಜಾ ಪರಿವರ್ತನಾ ವೇದಿಕೆಯ ಜಿಲ್ಲಾಧ್ಯಕ್ಷ ಸಿ ಆನಂದ್ ಕುಮಾರ್ ಕುಡುತಿನಿ ಪ್ರತಿಭಟನೆಯಲ್ಲಿ ಭಾಗವಹಿಸಿ ವೇದಿಕೆ ರೈತರ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುವುದು ಎಂದು ತಿಳಿಸಿದರು.

ರಾಜ್ಯ ಸರ್ಕಾರ ರೈತರ ಹೋರಾಟವನ್ನು ಪೊಲೀಸ್ ಬಲದ ಮೂಲಕ ದಮನ ಮಾಡುವುದನ್ನು ಮುಂದುವರೆಸಿದರೆ ಸರ್ಕಾರದ ವಿರುದ್ಧ ಹೋರಾಟವನ್ನು ತೀವ್ರ ಗೊಳಿಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ನೂರಾರು ಸಂಖ್ಯೆಯಲ್ಲಿದ್ದ ಪೊಲೀಸರು ಪ್ರತಿಭಟನಾಕಾರರನ್ನು ಬಂಧಿಸಿ ಕರೆದೊಯ್ದರು

# ಅರಿಶಿಣಪುಡಿ, ಮಸಾಲೆ ಪುಡಿಗಳಲ್ಲಿ ಅಪಾಯಕಾರಿ ಅಂಶ ಪತ್ತೆ
## ಸರ್ಕಾರದಿಂದಲೇ ಅಧಿಕೃತ ಟೆಸ್ಟ್‌ಗೆ ಆದೇಶ

■ ಕನ್ನಡ ಮಾತೃ ಭೂಮಿ ವಾರ್ತೆ



**ಬೆಂಗಳೂರು,**ಪ್ರತಿಯೊಂದು ಅಡಿಗೆಗೂ ಸಾಮಾನ್ಯ ವಾಗಿ ಅಡುಗೆಮನೆಯಲ್ಲಿ ಅರಿಶಿಣ ಪುಡಿ ಬಳಕೆ ಮಾಡುತ್ತಾರೆ. ಮಸಾಲೆ ಪುಡಿ, ಅರಿಶಿಣ ಪುಡಿ ಇಲ್ಲದೇ ಅಡುಗೆ, ಆಹಾರ ತಯಾರಿಕೆ ಸಂಪೂರ್ಣ ಆಗಲ್ಲ. ಅರಿಶಿಣ ಪುಡಿ ಅತ್ಯವಶ್ಯಕ. ಆದರೆ ಈಗ ರಾಜ್ಯದ ಜನರು ಆತಂಕ ಪಡುವಂತಹ ವಿಚಾರ ಬಯಲಿಗೆ ಬಂದಿದೆ. ಅರಿಶಿಣಪುಡಿಯಲ್ಲಿ ಕಲಬೆರಕೆ ಕುರಿತು ದೂರು ದಾಖಲಾಗುತ್ತಿದೆ. ಈ ಹಿನ್ನೆಲೆ ರಾಜ್ಯಾದ್ಯಂತ ಮಸಾಲೆ ಪೌಡರ್, ಅರಿಶಿಣ ಪುಡಿ ಟೆಸ್ಟ್‌ಗೆ ಸರ್ಕಾರವೇ ಆದೇಶಿಸಿದೆ.

ಅರಿಶಿಣ ಪುಡಿ ಮತ್ತು ಬೇರುಗಳಲ್ಲಿ ಸೀಸದ ಅಂಶ ಕಲಬೆರಕೆ ಮಾಡುತ್ತಿದ್ದಾರೆ ಎಂದು ಆಹಾರ ಸುರಕ್ಷತೆ ಮತ್ತು ಔಷಧಿ ನಿಯಂತ್ರಣ ಇಲಾಖೆಗೆ ದೂರು ದಾಖಲಾಗಿದೆ. ಅರಿಶಿಣಪುಡಿ ಮತ್ತು ಮಸಾಲೆ ಪುಡಿ ಗಟ್ಟಿ ಬರಲಿ ಅಂತಾ ಕಲಬೆರಕೆ ಮಾಡುತ್ತಿದ್ದಾರೆ ಎಂದು ದೂರು ದಾಖಲಾಗಿದೆ. ಹೀಗಾಗಿ ರಾಜ್ಯಾದ್ಯಂತ ಮಸಾಲೆ ಪುಡಿ ಅರಿಶಿಣ ಪುಡಿ ಟೆಸ್ಟ್ ಮಾಡಲು ಸರ್ಕಾರ ಆದೇಶ ಮಾಡಿದೆ.

ಅರಿಶಿಣ ಪುಡಿಗೆ ಯಾವುದೋ ಚೆಕ್ಕೆಯ ಪುಡಿಗಳನ್ನ ಮಿಕ್ಸ್ ಮಾಡುತ್ತಿದ್ದಾರೆ ಎಂಬುದು ದೂರು ದಾಖಲಾಗಿದೆ. ಈ ಕಲಬೆರಕೆಯಿಂದ ಕ್ಯಾನ್ಸರ್‌ಗೆ ಕಾರಣ ಆಗೋದು ಅಲ್ಲದೇ ಹಲವು ಹಾನಿಕಾರಕ ಅಂಶಗಳಿಗೆ ಕಾರಣ ಆಗಲಿದೆ. ಜೊತೆಗೆ ಖಾಯಿಲೆಗಳಿಗೆ ಮಾರ್ಗ ಆಗುತ್ತದೆ ಎಂಬುದು ಸರ್ಕಾರಕ್ಕೆ ಸಲ್ಲಿಕೆಯಾಗಿರುವ ದೂರಿನಲ್ಲಿ ಇರುವ ಅಂಶವಾಗಿದೆ. ಹೀಗಾಗಿ ರಾಜ್ಯಾದ್ಯಂತ ಮಸಾಲೆ ಪುಡಿ, ಅರಿಶಿಣ ಪುಡಿ ಸ್ಯಾಂಪಲ್ ಗಳನ್ನ ಕಲೆಕ್ಟ್ ಮಾಡಿ ಟೆಸ್ಟ್‌ಗೆ ರವಾನೆ ಮಾಡಲಾಗುತ್ತಿದೆ. ಇನ್ನೂ ಅರಿಶಿಣಪುಡಿ, ಮಸಾಲೆ ಪುಡಿಗಳಲ್ಲಿ ಸೀಸದ ಅಂಶ ಕಂಡು ಬಂದಲ್ಲಿ ಕೆಲ ಆಹಾರಗಲ ಮೇಲೆ ಕ್ರಮ ಕೈಗೊಳ್ಳುವ ಸಾಧ್ಯತೆ ಹೆಚ್ಚಾಗಿದೆ.

# ಲಿಡ್ಕರ್ ಮಾರಾಟ ಮಳಿಗೆಗೆ ಅಧ್ಯಕ್ಷರ ಭೇಟಿ, ಸಮಸ್ಯೆಗಳ ಅವಲೋಕನ
## ಲಿಡ್ಕರ್ ಮಳಿಗೆ ಅಭಿವೃದ್ಧಿಗೆ ಕ್ರಮ–ನಾಗರಾಜ ಸೂಚನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬೀದರ್,** ಡಾ. ಬಾಬು ಜಗಜೀವನ ರಾಂ ಅಭಿವೃದ್ಧಿ ನಿಗಮದ ವತಿಯಿಂದ ನೂತನವಾಗಿ ಆರಂಭಿಸಿರುವ ಲಿಡ್ಕರ್ ಮಾರಾಟ ಮಳಿಗೆಗೆ ನಿಗಮದ ಅಧ್ಯಕ್ಷರಾದ ಮುಂಡರಗಿ ನಾಗರಾಜ ಅವರು ಸೋಮವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಈ ವೇಳೆ ಮಳಿಗೆಯ ಕಾರ್ಯವೈಖರಿ ಕುರಿತು ಮಾಹಿತಿ ಪಡೆದು, ಸಮುದಾಯದ ಮುಖಂಡರು ಹಾಗೂ ಚರ್ಮ ಕುಶಲಕರ್ಮಿಗಳೊಂದಿಗೆ ಕುಂದುಕೊರತೆಗಳ ಬಗ್ಗೆ ಸಮಾ ಲೋಚನೆ ನಡೆಸಿದರು. ಕಾರ್ಮಿಕರ ಸಮಸ್ಯೆಗಳು, ಸೌಲಭ್ಯಗಳ ಕೊರತೆ ಮತ್ತು ಅಭಿವೃದ್ಧಿ ಕ್ರಮಗಳ ಕುರಿತು ಚರ್ಚಿಸಿ, ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.ಈ ಸಂದರ್ಭದಲ್ಲಿ ಬೀದರ ನಗರಸಭೆಯ ಮಾಜಿ ಅಧ್ಯಕ್ಷ ಪರ್ನ್ ಡಿಸ್, ಬಳ್ಳಾರಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಗೋವರ್ಧನ್, ಲಿಡ್ಕರ್ ಕಾಲೋನಿ ಸಮಾಜದ ಮುಖ್ಯಸ್ಥ ಶುಭಾಸ್, ಯುವ ಮುಖಂಡ ಪ್ರದೀಪ್ ಹೆಗ್ಡೆ, ಬೀದರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಲಿಡ್ಕರ್ ಜಿಲ್ಲಾ ಕಚೇರಿ ಸಿಬ್ಬಂದಿ ದತ್ತು ಹೊಸಮನಿ ಸೇರಿದಂತೆ ಇತರರು ಹಾಜರಿದ್ದರು.

# ಮುಂಬೈ ಅಭಿವೃದ್ಧಿ ಪ್ರಾಧಿಕಾರಕ್ಕೆ ಭೇಟಿ ನೀಡಿದ ಬುಡಾ ಅಧ್ಯಕ್ಷ, ಮೇಯರ್ ಸದಸ್ಯರು




■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಮಹಾನಗರಗಳಯೋಜನೆ, ವಿವಿಧ ರೀತಿಯ ಸಮಸ್ಯೆಗಳು ಹಾಗೂ ಅಭಿವೃದ್ಧಿಪಡಿಸುವ ಆಯಾಮಗಳ ಬಗ್ಗೆ ಇಲ್ಲಿನ ಬುಡಾ, ಪಾಲಿಕೆಯ ಜನಪ್ರತಿನಿಧಿಗಳು, ಅಧಿಕಾರಿಗಳು ಅಧ್ಯಯನಕ್ಕೆ ಮುಂಬೈಗೆ ತೆರಳಿದ್ದಾರೆ.

ಬುಡಾ ಅಧ್ಯಕ್ಷ ಜೆ.ಎಸ್. ಆಂಜಿನೇಯಲು, ಮೇಯರ್ ಪಿ.ಗಾದೆಪ್ಪನ, ಸದಸ್ಯರಾದ ಕೆ.ರಂಜಿತ್ ಕುರ್ಮಾ, ಕೆ.ಎಸ್ .ಭರತ್ ಕುಮಾರ್ , ನಗರ ಯೋಜನಾ ಸದಸ್ಯ ಎನ್. ಟಿ ಶಂಕರ್ ರೆಡ್ಡಿ ಹಾಗೂ ಬುಡಾ ಸಿಬ್ಬಂದಿ ಮುಂಬೈ ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಭೇಟಿನೀಡಿ ಪ್ರಾಧಿಕಾರದ ಆಯುಕ್ತ ಸಂಜಯ್ ಮುಖರ್ಜಿ ಹಾಗೂ ಮುಖ್ಯ ನಗರ ಯೋಜಕ ಶಂಕರ ದೇಶಪಾಂಡೆ ಹಾಗೂ ತಾಂತ್ರಿಕ ಅಧಿಕಾರಿಗಳನ್ನು ಭೇಟಿ ಮಾಡಿ ಸಭೆಯ ಮೂಲಕ ಚರ್ಚೆ ನಡೆಸಿ ಮನನ ಮಾಡಿದ್ದಾರಂತೆ.

# ಮಂಗಳೂರಿನ ಪದವು ಕುಲಶೇಖರದಲ್ಲಿ ಜಿಲ್ಲೆಯ ಮೊದಲ ಶನೈಶ್ಚರ ದೇವಸ್ಥಾನ

**ಮಂಗಳೂರು (ದಕ್ಷಿಣ ಕನ್ನಡ),ಏ.28**– ಶನೇಶ್ವರ ಮಹಾತ್ಮನಿಗೆ ಆಗಮೋಕ್ತ ಸಿದ್ಧಾಂತದ ಪ್ರಕಾರ ನಿರ್ಮಿಸಲಾಗಿರುವದ್.ಕ್.ಜಿಲ್ಲೆಯ ಮೊದಲ ದೇವಸ್ಥಾನ ನಗರದ ಪದವು ಕುಲಶೇಖರದಲ್ಲಿ ತಲೆ ಎತ್ತಿದೆ. ನೂತನವಾಗಿ ನಿರ್ಮಾಣಗೊಂಡ ಶ್ರೀ ಶನೈಶ್ಚರ ದೇವಸ್ಥಾನ ಲೋಕಾರ್ಪಣೆಗೊಂಡಿದೆ. ಈ ದೇವಸ್ಥಾನದಲ್ಲಿಂದು ಶ್ರೀ ಶನೈಶ್ಚರ, ಶ್ರೀ ಮಹಾಗಣಪತಿ, ಶ್ರೀದುರ್ಗಾದೇವಿ, ನವಗ್ರಹ ದೇವರುಗಳ ಬಿಂಬ ಪ್ರತಿಷ್ಠಾಪನೆಗೊಂಡು ಬ್ರಹ್ಮಕಲ ಶೋತ್ಸವ ನೆರವೇರಿತು.




ಹಿಂದೂ ಯುವ ಸೇನೆ ಪದವು ಶಾಖೆಯು 1990 ರಿಂದ ಕುಲಶೇಖರ ಕೈಕಂಬದಲ್ಲಿನ ಅಶ್ವತ್ಥ ಕಟ್ಟೆಯಲ್ಲಿ ಶನಿ ದೇವರ ಆರಾಧನೆ ಮಾಡುತ್ತಾ ಬರುತ್ತಿತ್ತು. ಈ ನಡುವೆ ಎರಡು ಬಾರಿ ಶ್ರೀ ಸಗ್ರಹ ಮುಖ ಶನೈಶ್ಚರ ಮಹಾಯಾಗ ನಡೆಸಲಾಗಿತ್ತು. 2023ರಲ್ಲಿ ಶ್ರೀ ಶನೈಶ್ಚರ ದೇವಸ್ಥಾನ ನಿರ್ಮಾಣ ಸಮಿತಿ ರಚಿಸಿ, 10 ಸೆಂಟ್ಸ್ ಜಾಗ ಖರೀದಿಸಿ,

ನೂತನ ಶಿಲಾಮಯ ಶ್ರೀ ಶನೈಶ್ಚರ ದೇವಸ್ಥಾನದ ಶಿಲಾನ್ಯಾಸ 2024ರಲ್ಲಿ ನಿರ್ಮಿಸಲಾಯಿತು. ಇದೀಗ ಪ್ರಶ್ನಾ ಚಿಂತನೆಯಲ್ಲಿ ಶನೈಶ್ಚರ ದೇವಸ್ಥಾನದಲ್ಲಿ ನವಗ್ರಹ ಸಹಿತ ಶ್ರೀ ಶನೈಶ್ಚರ, ಮಹಾಗಣಪತಿ, ದುರ್ಗಾದೇವಿ ಬಿಂಬ ಪ್ರತಿಷ್ಠಾಪನೆ ಮಾಡಿ ಬ್ರಹ್ಮಕಲಶ ನೆರವೇರಿದೆ. ಈ ಶನೈಶ್ಚರ ದೇವಸ್ಥಾನದ ಬ್ರಹ್ಮಕಲಶ ಕಾರ್ಯಕ್ರಮ ಸೌಹಾರ್ದಯುತವಾಗಿ ಸಂಪನ್ನಗೊಂಡಿದೆ. ಸಾವಿರಾರು ಮಂದಿ ಸೇರುವ ಈ ಕಾರ್ಯಕ್ರಮಕ್ಕೆ ಸ್ಥಳಾವಕಾಶ ಅಷ್ಟೇ ಬೇಕಾಗುತ್ತದ್. ಆದರೆ ದೇವಸ್ಥಾನದ ಅಂಗಣದಲ್ಲಿ ಅಷ್ಟೊಂದು ಜಾಗವೇ ಇಲ್ಲ. ಆದ್ದರಿಂದ, ಪಾರ್ಕಿಂಗ್, ಅನ್ನಛತ್ರ, ಧಾರ್ಮಿಕ ಸಭಾ ವೇದಿಕೆ ಇತ್ಯಾದಿ ಕಾರ್ಯಕ್ರಮಗಳಿಗೆ ಹಿಂದೂ, ಮುಸ್ಲಿಂ ಹಾಗೂ ಕ್ರಿಶ್ಚಿಯನ್ ಬಾಂಧವರು ಇದಕ್ಕಾಗಿ ತಮ್ಮ ಜಾಗವನ್ನು ಉದಾರವಾಗಿ ನೀಡಿ ಸಹಕರಿಸಿದ್ದು ವಿಶೇಷ.ಈ ಬಗ್ಗೆ ಮಾತನಾಡಿದ ದೇವಸ್ಥಾನ ಬ್ರಹ್ಮಕಲ ಶೋತ್ಸವ ಸಮಿತಿಯ ಉಪಾಧ್ಯಕ್ಷ ಉಮೇಶ್ ರೈ ಪದವು ಮೇಗಿನ ಮನೆ ಅವರು,

ಹಿಂದೂ ಯುವ ಸೇನೆಯಿಂದ ಕಟ್ಟೆಯಲ್ಲಿ ಶನಿ ದೇವರ ಆರಾಧನೆ ನಡೆಯುತ್ತಿತ್ತು. ಬಳಿಕ ಮಂದಿರವಾಗಿ ರೂಪುಗೊಂಡ ಶನಿದೇವರ ಆರಾಧನೆ ಕೇಂದ್ರ ಪ್ರಶ್ನಾ ಚಿಂತನೆಯಲ್ಲಿ ಬಂದ ನಿರ್ದೇಶನದಂತೆ ದೇವಸ್ಥಾನದ ರೂಪ ಪಡೆದಿದೆ. ಇಲ್ಲಿ ಮಹಾಗಣಪತಿ, ನವಗ್ರಹಸಹಿತ ಶನೈಶ್ಚರ ಹಾಗೂ ದುರ್ಗೆಯರ ಗುಡಿಯನ್ನು ನಿರ್ಮಾಣ ಮಾಡಲಾಗಿದೆ. ಹಿಂದೂ ಯುವ ಸೇನೆ, ಊರಿನವರು, ಪರಊರಿನವರು,

ದಕ್ಷಿಣ ಕನ್ನಡದ ಎಲ್ಲಾ ಶಾಖೆಯ ಪ್ರಮುಖರು ಸೇರಿಕೊಂಡು ಶನೈಶ್ಚರ ದೇವಸ್ಥಾನ ನಿರ್ಮಿಸಿದ್ದಾರೆ. ಇದು ದಕ್ಷಿಣ ಕನ್ನಡ ಜಿಲ್ಲೆಯ ಮೊದಲ ಶನೈಶ್ಚರ ದೇವಸ್ಥಾನ ಎಂದು ತಿಳಿಸಿದ್ದಾರೆ.

ಒಟ್ಟಿನಲ್ಲಿ ಕಟ್ಟೆಯಲ್ಲಿ ಆಗುತ್ತಿದ್ದ ಶನೈಶ್ಚರನ ಆರಾಧನೆ ದೇವಸ್ಥಾನದ ಮಟ್ಟಕ್ಕೆ ತಲುಪಿದ್ದು, ಜನರ ಭಕ್ತಿಗೆ ಸಾಕ್ಷಿಯೆನಿಸಿದೆ.

# ವಿಎ,ಆರ್ ಐಗಳಿಗೆ 17 ಲ್ಯಾಪ್ ಟಾಪ್ ಗಳ ವಿತರಣೆ
## ಕಂದಾಯ ಇಲಾಖೆ ಕೆಲಸ ನಿಗದಿತ ಅವಧಿಯೊಳಗೆ ಮುಗಿಸಿ : ಶಾಸಕ ತುನ್ನೂರ ಸೂಚನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಏ.28**–ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆಯೇ ಇ ಆಫೀಸ್, ಇ ಪಾವತಿ ಸೇರಿದಂತೆಯೇ ಇತರೇ ಕೆಲಸಗಳು ಗಣಕಿರಣದ ಮೂಲಕವೇ ಮಾಡಬೇಕು ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು. ಇಲ್ಲಿನ ಅವರ ಜನಸಂಪರ್ಕ ಕಚೇರಿಯಲ್ಲಿ ಮಂಗಳವಾರ ಸುಮಾರು 17 ಲ್ಯಾಪ್ ಟಾಪ್ ಗಳನ್ನು ವಿಎ, ಹಾಗೂ ಆರ್ ಐಗಳಿಗೇ ವಿತರಿಸಿ ಅವರು ಮಾತನಾಡಿದರು.



ಕಂದಾಯ ಸಚಿವ ಕೃಷ್ಣ ಬೈರೈಗೌಡ ಅವರು ತಮ್ಮ ಇಲಾಖೆಯಲ್ಲಿ ತಂತ್ರಜ್ಞಾನ ಅಳವಡಿಸುವ ಮೂಲಕ ದಾಖಲೆ,ಕೆಲಸಗಳು ಉತ್ತಮವಾಗಿ ನಡೆಯುವಂತೆಯೇ ಮಾಡಿದ್ದಾರೆ. ಕಾರಣ ಇಂದು ಲ್ಯಾಪ್ ಟಾಪ್ ಪಡೆದ ವಿಎ ಮತ್ತು ಆರ್ ಐ ಅವರುಗಳು ತಪ್ಪದೇ ಇದರ್ ಮೂಲಕವೇ ಕೆಲಸಗಳನ್ನು ಮಾಡಬೇಕು. ನಿಗದತ ಅವಧಿಯೊಳಗೆ ಎಲ್ಲವೂ ಮುಗಿಸಬೇಕೆಂದರು.

ಸರ್ಕಾರದಿಂದ ತಾಲೂಕಿನ ಕಂದಾಯ ಇಲಾಖೆಗೆ ಸಂಬಂಧಸಿದ ಕೆಲಸಗಳನ್ನು ಕೈಗೊಳ್ಳಲು ಸರ್ಕಾರದಿಂದ ಬಂದಿದ್ದ 17 ಲ್ಯಾಪ್ ಟಾಪ್ ಗಳನ್ನು ಶಾಸಕರ ಮೂಲಕ ವಿತರಿಸಲಾಗಿದೆ. ಇದರ ಬಳಗೆ ಬಗ್ಗೆ ಅವರಿಗೆ ತಿಳಿಸಲಾಗಿದೆ ಎಂದರು.ತಹಸೀಲ್ದಾರ ಸುರೇಶ ಅಂಕಲಗಿ ಮಾತನಾಡಿ, ಸರ್ಕಾರದ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳ ಕಾರ್ಯವೈಕರಿ ಹೆಚ್ಚಿಸುವ ಮತ್ತು ಅವರು ಡಾಟಾ ಎಂಟ್ರಿ ಮಾಡಲು ಅನುಕೂಲದ ಹಿತದೃಷ್ಟಿಯಿಂದ ಲ್ಯಾಪ್‌ಟಾಪ್‌ಗಳನ್ನು ನೀಡಿದೆ. ಈ ಯೋಜನೆಯ ಸದುಪಯೋಗದೊಂದಿಗೆ ಜನರ ಸೇವೆಯನ್ನು ಅತಿ ವೇಗದಲ್ಲಿ ಮಾಡಲು ಮುಂದಾಗಬೇಕು ಎಂದರು.

ಸಿಬ್ಬಂದಿಗಳಾದ ಮಲ್ಲಿಕಾರ್ಜುನ ಬೂದಿಹಾಳ, ಮಲ್ಲಿಕಾರ್ಜುನ ಈಟೆ, ಗಿರೀಶ ರಾಯಕೋಟಿ, ರಾಜಶೇಖರ ಪಾಟೀಲ್, ಬಸವರಾಜ ಮುಖಂಡರಾದ ಶರಣಗೌಡ ಬಬಲಾದ ಇದ್ದರು.

# ಪಿಎಂ ಆದರ್ಶ ಗ್ರಾಮ ಯೋಜನೆಯಡಿ ಕೈಗೊಂಡ ಕಾಮಗಾರಿ ಕಳಪೆ
## ರಸ್ತೆ ಮೇಲೆ ಚರಂಡಿ ನೀರಿನಲ್ಲಿಯೇ ಕುಳಿತು ಕೆಆರ್‌ಎಸ್ ಪಕ್ಷದಿಂದ ಪ್ರತಿಭಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಏ.28**–ಜಿಲ್ಲೆಯ ಶಹಾಪೂರ ತಾಲೂಕಿನ ಮನಗನಾಳ ಗ್ರಾಮದಲ್ಲಿ 2021-22ನೇ ಸಾಲಿನ ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಅತ್ಯಂತ ಕಳಪೆ ಗುಣಮಟ್ಟದಲ್ಲಿ ನಡೆದಿದೆ ಎಂದು ಆರೋಪಿಸಿ ಕರ್ನಾಟಕ ರಾಷ್ಟ ಸಮಿತಿ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್. ನಿಜಲಿಂಗಪ್ಪ ಪೂಜಾರಿ ರಸ್ತೆ ಮೇಲೆ ಹರಿದ ಚರಂಡಿ ನೀರಿನಲ್ಲಿ ಕುಳಿತು ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದರು.



ಪಿಎಂ ಆದರ್ಶ ಗ್ರಾಮ ಯೋಜನೆಯಡಿ ನಿರ್ಮಿಸಿದ ಸಿಸಿ ರಸ್ತೆ ಅವೈಜ್ಞಾನಿಕವಾಗಿದ್ದು, ಕಾಮಗಾರಿ ಆಗುತ್ತಿದ್ದಂತೆಯೇ ಚರಂಡಿ ನೀರು ರಸ್ತೆ ಮೇಲೆ ಬಂದು ನಿಲ್ಲುತ್ತಿದ್ದು ಬಿಲ್ ತಡೆಹಿಡಿಯುವಂತೆ ಸಲ್ಲಿಸಿದ ದೂರಿಗೆ ಪ್ರತಿಯಾಗಿ ಸ್ಥಳಕ್ಕೆ ಬಂದ ಇಇ ಅವರ ಎದುರಿಗೆ ರಸ್ತೆ ಮೇಲೆ ಹರಿದುಬಂದು ನಿಂತ ನೀರಿನಲ್ಲಿಯೇ ಕುಳಿತು ಪ್ರತಿಭಟನೆ ನಡೆಸಿದ ಅವರು, ಕಾಮಗಾರಿ ಕಳಪೆಯಾಗಿದ್ದರಿಂದ ರಸ್ತೆ ಮೇಲೆ ಚರಂಡಿ ನೀರು ನಿಂತರೆ ರಸ್ತೆ ಉಳಿಯುವುದಾದರೂ ಹೇಗೆ ಎಂದು ಪ್ರಶ್ನಿಸಿದರು.

ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿ. ಜಿಲ್ಲಾ ಕಚೇರಿಯಿಂದ ಕಾಮಗಾರಿ ಪೂರ್ಣಗೊಳಿಸಲಾಗಿದೆ. ರಸ್ತೆ ಹದಗೆಟ್ಟಿರುವುದರಿಂದ ಸಾರ್ವಜನಿಕರಲ್ಲಿ ಆಕ್ರೋಶ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶಾಂತಿ-ಸುವ್ಯವಸ್ಥೆಗೆ ಧಕ್ಕೆಯಾಗುವ ಸಾಧ್ಯತೆ ಇದೆ ಇದೆಲ್ಲವೂ ಆಗುವ ಮೊದಲೇ ಕಾಮಗಾರಿಯ ಬಿಲ್ ತಡೆ ಹಿಡಿಯಬೇಕು ಮತ್ತು ಸರಿಯಾದ ಕಾಮಗಾರಿಯನ್ನು ಸಂಬಂಧಪಟ್ಟವರಿಂದಲೇ ಮಾಡಿಸಬೇಕು ಎಂದು ಒತ್ತಾಯಿಸಿದರು.ಈ ವಿಷಯವನ್ನು ಅತ್ಯಂತ ತುರ್ತು ವಿಷಯವೆಂದು ಪರಿಗಣಿಸಿ ಈ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸ್ವತಃ ಪರಿಶೀಲನೆ ನಡೆಸಿ, ಸಂಬಂಧಿಸಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸ್ಥಳದಿಂದಲೇ ಮನವಿ ಪತ್ರ ರವಾನಿಸಿ ಒತ್ತಾಯಿಸಿದರು.ಈ ಸಂದರ್ಭದಲ್ಲಿ ಸ್ಥಳದಲ್ಲಿ ಕೆಆರ್‌ಐಡಿಎಲ್ ಇಇ ನ್ಯಾಯವಾದಿ ಮಲ್ಲಿಕಾರ್ಜುನ ಮನಗನಾಳ, ಕೆಆರ್‌ಎಸ್ ಪಕ್ಷದ ಜಿಲ್ಲಾ

# ಅಂಚೆ ಇಲಾಖೆಯ ಸೇವೆಗಳು ಈಗ ಸಾರ್ವಜನಿಕರ ಮನೆ ಬಾಗಿಲಿಗೆ–ಅಂಚೆ ನಿರೀಕ್ಷಕ ಮಲ್ಲಪ್ಪ ಪೂಜಾರಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಇಂಡಿ,**.ಭಾರತೀಯ ಅಂಚೆ ಇಲಾಖೆಯ ವಿಜಯಪುರ ವಿಭಾಗದ ಅಡಿಯಲ್ಲಿ ಬರುವ ಇಂಡಿ ಉಪ ವಿಭಾಗದ ವತಿಯಿಂದ ತಾಲೂಕಿನ ಇಂಗಳಗಿ ಗ್ರಾಮದ ಹನುಮಾನ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತೀಯ ಅಂಚೆ ನಿಮ್ಮ ಮನೆ ಬಾಗಿಲಿಗೆ ಎಂಬ ಅಂಚೆ ಜನಸಂಪರ್ಕ ಅಭಿಯಾನವು ಯಶಸ್ವಿಯಾಗಿ ಜರುಗಿತು.




ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ವಿಸ್ತಾರವಾಗಿ ಮಾತನಾಡಿದ ಅಂಚೆ ನಿರೀಕ್ಷಕ ಮಲ್ಲಪ್ಪ ಪೂಜಾರಿ ಅವರು, ಇಂದಿನ ಆಧುನಿಕ ಯುಗದಲ್ಲಿ ಅಂಚೆ ಇಲಾಖೆಯು ಕೇವಲ ಪತ್ರ ತಲುಪಿಸುವ ಕೆಲಸಕ್ಕೆ ಸೀಮಿತವಾಗಿಲ್ಲ. ಬದಲಾಗಿ ಒಂದೇ ಸೂರಿನಡಿಯಲ್ಲಿ ಬ್ಯಾಂಕಿಂಗ್, ವಿಮೆ, ಉಳಿತಾಯ ಯೋಜನೆಗಳು ಹಾಗೂ ಆಧಾರ್ ಸೇವೆಗಳನ್ನು ಒಳಗೊಂಡಂತೆ ಹತ್ತಾರು ಜನಪರ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುತ್ತಿದೆ ಎಂದು ಮಾಹಿತಿ ನೀಡಿದರು. ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಆರ್ಥಿಕ ಭದ್ರತೆ ನೀಡಲು ಅಂಚೆ ಇಲಾಖೆಯು ಬದ್ಧವಾಗಿದೆ ಎಂದು ಅವರು ತಿಳಿಸಿದರು.

ನಂತರ ಬ್ರಾಂಚ್ ಪೋಸ್ಟ್ ಮಾಸ್ಟರ್ ಸುಭಾಸ ಘೋರಾತ ಮಾತನಾಡಿ, ಭಾರತೀಯ ಅಂಚೆ ನಿಮ್ಮ ಮನೆ ಬಾಗಿಲಿಗೆ ಎಂಬ ಅಭಿಯಾನದ ಅಡಿಯಲ್ಲಿ ನಾವು ಪ್ರತಿಯೊಂದು ಮನೆಗೂ ಅಂಚೆ ಇಲಾಖೆಯ ಸೌಲಭ್ಯಗಳನ್ನು ತಲುಪಿಸುತ್ತಿದ್ದೇವೆ. ವಿಶೇಷವಾಗಿ ಗ್ರಾಮೀಣ ಭಾಗದ ರೈತರು, ಹಿರಿಯ ನಾಗರಿಕರು ಮತ್ತು ಮಹಿಳೆಯರಿಗೆ ಆರ್ಥಿಕ ಭದ್ರತೆ ನೀಡುವ ನಿಟ್ಟಿನಲ್ಲಿ ನಾವು ಸದಾ ಸಿದ್ಧರಿದ್ದೇವೆ. ಜನರಿಗೆ ಅಗತ್ಯವಿರುವ ಎಲ್ಲಾ ಅಂಚೆ ಮತ್ತು ಬ್ಯಾಂಕಿಂಗ್ ಸೇವೆಗಳನ್ನು ಕಾಲಮಿತಿಯಲ್ಲಿ ಒದಗಿಸಲು ನಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ, ಎಂದು ಭರವಸೆ ನೀಡಿದರು.ಕಾರ್ಯಕ್ರಮದಲ್ಲಿ ಅಂಚೆ ಮೇಲ್ವಿಚಾರಕರಾದ ಕೆ. ಎಂ. ಬಂಡಗರ್, ಜೆ. ಆರ್. ಬಿರಾದಾರ ಹಾಗೂ ಗ್ರಾಮಸ್ಥರಾದ ಅರ್ಜುನ ಜಾಧವ, ಹಸನ ಮಣೂರ, ಆನಂದ ಪವಾರ, ಅಣ್ಣಪ್ಪ ಅಹಿರಸಂಗ, ಉಮೇಶ ಚವಾಣ, ಅಶೋಕ ಬಳಬಟ್ಟಿ, ವಿಠ್ಠಲ ಹೊನಮಾನೆ, ಪ್ರಭಾಕರ ವಾಲಿಕಾರ, ವರದಪ್ಪ ಓಂಕಾರಶೆಟ್ಟಿ, ಚಿಮ್ಮಾಜಿ ಘೋರಾತ, ಗುಡುಸಾಬ ಅಹಿರಸಂಗ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು. ಇಂಗಳಗಿ ಗ್ರಾಮದ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅಂಚೆ ಇಲಾಖೆಯ ವಿವಿಧ ಯೋಜನೆಗಳ ಮಾಹಿತಿಯನ್ನು ಪಡೆದುಕೊಂಡರು.

# ...ಮೊದಲನೇ ಪುಟದಿಂದ

## ಬಿಸಿ ಮುಟ್ಟಿಸಿದ ಬೆಂಗಳೂರು ಪೊಲೀಸ್: 24 ಆರೋಪಿಗಳ ಬಂಧನ್

ಸಿಸಿಬಿ ಪೊಲೀಸರಿಂದಲೂ ವಿಶೇಷ ಕಾರ್ಯಾಚರಣೆ: ಅಕ್ರಮವಾಗಿ ಐಪಿಎಲ್ ಪಂದ್ಯಗಳ ಟಿಕೆಟ್‌ಗಳನ್ನು ಮಾರಾಟ ಮಾಡುತ್ತಿದ್ದವರ ವಿರುದ್ಧ ಸಿಸಿಬಿ ಪೊಲೀಸರೂ ಸಹ ಪ್ರತ್ಯೇಕ ಕಾರ್ಯಾಚರಣೆ ಮುಂದುವರೆಸಿದ್ದಾರೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಹಾಗೂ ಲಕ್ನೋ ಸೂಪರ್ ಜೈಂಟ್ಸ್ (ಎಲ್‌ಎಸ್‌ಜಿ) ನಡುವಿನ ಪಂದ್ಯದ ವೇಳೆ ಟಿಕೆಟ್ ಮಾರುತ್ತಿದ್ದ ಆರೋಪದಡಿ ಚಿನ್ನಸ್ವಾಮಿ ಕ್ರೀಡಾಂಗಣದ ಶ್ರೀ ಲಕ್ಷ್ಮೀ ಕ್ಯಾಂಟೀನ್‌ನ ನೌಕರ ಪಿ.ಚಂದ್ರಶೇಖರ್ ಎಂಬಾತನನ್ನು ಸಿಸಿಬಿ ಪೊಲೀಸರು ಬಂಧಿಸಿದ್ದರು. ಆರೋಪಿಯ ಬಳಿ ಸುಮಾರು 100ಕ್ಕೂ ಅಧಿಕ ಟಿಕೆಟ್‌ಗಳು ಪತ್ತೆಯಾಗಿದ್ದವು. ಕಾರ್ಪೊರೇಟ್ ಕಂಪನಿಗಳ ಹೆಸರಿನಲ್ಲಿ ಖರೀದಿಸಿದ್ದ ಟಿಕೆಟ್‌ಗಳನ್ನು ಅಕ್ರಮ ಮಾರ್ಗದಲ್ಲಿ ಮಾರಾಟ ಮಾಡಲಾಗುತ್ತಿದ್ದುದು ಕಂಡುಬಂದ ಹಿನ್ನೆಲೆಯಲ್ಲಿ ಆ ಕಂಪನಿಗಳ ವ್ಯವಸ್ಥಾಪಕ ನಿರ್ದೇಶಕರ ವಿರುದ್ಧ ಸಿಸಿಬಿ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿತ್ತು.

## ದೇಶದಲ್ಲಿಯೇ ನಂಬರ್ 1: ಮಾಹಿತಿ ಹಂಚಿಕೊಂಡ ಸಚಿವ ಪ್ರಿಯಾಂಕ್ ಖರ್ಗೆ!

ಅಂತರವನ್ನು ಒತ್ತಿಹೇಳುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಬೆಂಗಳೂರು ಇಂದು ಅಮೆರಿಕ, ಯುರೋಪ್ ಹಾಗೂ ಚೀನಾದ ಹೊರಗೆ ಅತಿದೊಡ್ಡ ಸ್ಟಾರ್ಟ್‌ಅಪ್ ಕೇಂದ್ರವಾಗಿ ಮತ್ತು ಜಾಗತಿಕವಾಗಿ 5 ನೇ ಅತಿದೊಡ್ಡ ಯುನಿಕಾರ್ನ್ ಕೇಂದ್ರವಾಗಿ ನಿಂತಿದೆ. ನಮ್ಮ ನಾಯಕತ್ವವು ಬಂಡವಾಳ ಹಾಗೂ ಉತ್ತಮ ಗುಣಮಟ್ಟದ ಉದ್ಯಮಿಗಳನ್ನು ಆಕರ್ಷಿಸುತ್ತಲೇ ಇರುವ ಪ್ರಬಲ, ಸಂಯೋಜಿತವಾದ ಇಕೋ ಸಿಸ್ಟಂನಿಂದ ಮೂಡಿ ಬಂದಿದೆ ಎಂದು ಸಚಿವರು ತಿಳಿಸಿದ್ದಾರೆ. ಡೀಪ್ ಟೆಕ್‌ನಿಂದ ದೈನಂದಿನ ತಂತ್ರಜ್ಞಾನದವರೆಗೆ, ಬೆಂಗಳೂರಿನ ಸ್ಟಾರ್ಟ್‌ಅಪ್‌ಗಳು ಪ್ರತಿಯೊಂದು ಪ್ರಮುಖ ವಲಯದಲ್ಲೂ ಪ್ರಾಬಲ್ಯ ಸಾಧಿಸಿವೆ ಎಂದು ಮಾಹಿತಿ ನೀಡಿರುವ ಸಚಿವ ಪ್ರಿಯಾಂಕ್ ಖರ್ಗೆ, ಇಂದು ಬೆಂಗಳೂರು ನಗರವನ್ನು ಭಾರತದ ತಂತ್ರಜ್ಞಾನ ಆರ್ಥಿಕತೆಯ ಕೇಂದ್ರದಲ್ಲಿರಿಸಿದೆ ಎಂದು ಸಂತಸ ಹಂಚಿಕೊಂಡಿದ್ದಾರೆ.

## ದಲಿತ ಸಿಎಂ ಬೇಡಿಕೆ ಮತ್ತೆ ಒತ್ತಿ ಹೇಳಿದ ರಾಜಣ್ಣ

ಹೇಳಿದ್ದೇವೆ ಎಂದು ಪ್ರತಿಕ್ರಿಯೆ ನೀಡಿದರು. ದಲಿತ ಸಿಎಂ ಆಗಬೇಕು ಎಂಬುದಕ್ಕೆ ನಾನು ಈಗಲೂ ಬದ್ಧ. ಅಹಿಂದ ವರ್ಗ ನಿಜವಾಗಿ ಸಮಾಧಾನವಾಗಿಲ್ಲ. 2013-18 ರ ಸಿದ್ದರಾಮಯ್ಯಗೂ ಈಗಿನ 2023-28 ಸಿದ್ದರಾಮಯ್ಯಗೂ ಬಹಳ ವ್ಯತ್ಯಾಸ ಇದೆ. ಮುಂದಿನ ಚುನಾವಣೆ ಎರಡು ವರ್ಷ ಇದೆ. ಮುಂದಿನ ರಾಜಕೀಯ ಹೀಗೇ ಆಗಬಹುದು ಎಂಬುದನ್ನು ಹೇಳಲು ಈಗಲೇ ಸಾಧ್ಯವಿಲ್ಲ. ರಾಜಕಾರಣದಲ್ಲಿ ಬಹಳಷ್ಟು ನೀರು ಹರಿಬೇಕಾದ ಸಮಯವೂ ಇದೆ ಎಂದರು.

ಹಾಲಿ ಸಚಿವರ ಸೋಲುವ ವರದಿ ವಿಚಾರವಾಗಿ ಪ್ರತಿಕ್ರಿಯಿಸಿ, ಸೋಲು - ಗೆಲವು ರಾಜಕೀಯದಲ್ಲಿ ಇದ್ದಿದ್ದೇ. ಈ ಹಿಂದೆ ಎಸ್.ಎಂ.ಕೃಷ್ಣ ಕಾಲದಲ್ಲಿ ಬಹುತೇಕ ಸಚಿವರು ಸೋತು ಹೋದ್ರು. ಸ್ವತಃ ಕೃಷ್ಣ ಅವರು ಮದ್ದೂರಿನಿಂದ ಚಾಮರಾಜಪೇಟೆ ಕ್ಷೇತ್ರಕ್ಕೆ ಹೋದ್ರು. ಹೀಗೆ ಆಗುತ್ತದೆ ಅಂತ ಈಗಲೇ ಏನು ಹೇಳಲು ಆಗಲ್ಲ. ರಾಜಕೀಯ ದಿಕ್ಸೂಚಿ ಹೇಳಲು ಕಾಲ ಪಕ್ವವಾಗಿಲ್ಲ ಎಂದು ರಾಜಣ್ಣ ಅಭಿಪ್ರಾಯಪಟ್ಟರು.

## ಅಧಿಕಾರಿಗಳ ಸಮರ್ಪಕ ಮೇಲುಸ್ತುವಾರಿ ಮಾಡಿ-ದದ್ದಲ್ ಬಸನಗೌಡ ಸೂಚನೆ

ರೂಪಿಸಿ ಜಿಲ್ಲಾ ಪಂಚಾಯತ್‌ಗೆ ಪ್ರಸ್ತವಾನೆ ಸಲ್ಲಿಸಬೇಕು ಎಂದು ತಿಳಿಸಿದರು. ಗ್ರಾಮ ಆಡಳಿತಾಧಿಕಾರಿಗಳಾಗಿ ನೇಮಕವಾದ ಅಧಿಕಾರಿಗಳು, ಆಯಾ ಗ್ರಾಮ ಪಂಚಾಯತ್‌ಗಳಿಗೆ ಭೇಟಿ ನೀಡಿ, ಅಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ಪ್ರಥಮಾಧ್ಯತೆಯನ್ನಾಗಿಸಕೊಂಡು, ಸಮಸ್ಯೆಗೆ ಪರಿಹಾರ ನೀಡುವ ನಿಟ್ಟಿನಲ್ಲಿ ಪಂಚಾಯತ್ ಖಾತೆಗಳನ್ನು ಪರಿಶೀಲಿಸಬೇಕು. ಅನುಧಾನ ಲಭ್ಯತೆಯ ಬಗ್ಗೆಯೂ ಮಾಹಿತಿಯನ್ನು ಪಡೆದುಕೊಳ್ಳಬೇಕು. ಆಡಳಿತಾಧಿಕಾರಿಗಳು ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಭೆಗಳನ್ನು ನಡೆಸಬೇಕು ಎಂದರು.

ಸದ್ಯ ಹಲವು ಗ್ರಾಮ ಪಂಚಾಯತ್‌ಗಳಲ್ಲಿ ಚುನಾಯಿತ ಪ್ರತಿನಿಧಿಗಳ ಅವಧಿ ಮುಗಿದಿದ್ದು, ಆಡಳಿತಾಧಿಕಾರಿಗಳೇ ಜನರ ಸಮಸ್ಯೆಗಳನ್ನು ಆಲಿಸಬೇಕಾಗುತ್ತದೆ ಮತ್ತು ಅದಕ್ಕೆ ಸ್ಪಂಧಿಸಬೇಕಾಗುತ್ತದೆ ಎಂದು ಹೇಳಿದರು.

ಅಂತರ್ಜಲ ಕುಸಿಯುತ್ತಿದ್ದು, ಜಲ ಮೂಲಗಳ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ತಾಲೂಕು ವ್ಯಾಪ್ತಿಯಲ್ಲಿನ 12 ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ 21 ಗ್ರಾಮಗಳಲ್ಲಿ 25 ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆದುಕೊಳ್ಳಲಾಗಿದೆ. ಪಿಡಿಓಗಳು ಬೋರ್‌ವೆಲ್‌ಗಳ ಅಗತ್ಯವಿದ್ದರೇ ಸಭೆಯಲ್ಲಿ ತಿಳಿಸಬೇಕು. ಅದಕ್ಕೆ ಕ್ರಮ ಕೈಗೊಳ್ಳಲಾಗುತ್ತದೆ. ಪಂಚಾಯತ್ ವ್ಯಾಪ್ತಿಯ ಶಾಲೆ, ಗ್ರಂಥಾಲಯಗಳಿಗೆ ನೀರನ್ನು ಒದಗಿಸಲು ಯೋಜನೆ ರೂಪಿಸಬೇಕು ಎಂದರು.

ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ಮಾಡಲು ಬಿಡದೇ, ಅಡ್ಡಿ ಪಡಿಸುತ್ತಿರುವ ಬಗ್ಗೆ ಮಾಹಿತಿಯಿದ್ದು, ಅಂತವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಪೊಲೀಸ್ ಠಾಣೆಗೆ ಪಂಚಾಯತ್‌ನಿಂದ ಪತ್ರ ಬರೆದು ಭದ್ರತೆಯೊಂದಿಗೆ ಕಾಮಗಾರಿಗಳನ್ನು ಮಾಡಿಸಬೇಕು ಎಂದು ತಿಳಿಸಿದರು.

ಆಡಳಿತಾಧಿಕಾರಿಗಳು ಸಭೆ ಕರೆದಾಗ ಆಯಾ ಗ್ರಾಮಗಳ ವ್ಯಾಪ್ತಿಯ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಸಭೆಗೆ ಹಾಜರಾಗಬೇಕು ಎಂದು ಕಟ್ಟು ನಿಟ್ಟಿನ ಸೂಚನೆ ನಿಡಿದರು.

ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನಗೌಡ, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್, ತಾಲೂಕು ಪಂಚಾಯತ್ ಆಡಳಿತಾಧಿಕಾರಿ ವನಿತಾ, ರಾಯಚೂರು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಮಾನ್ವಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಖಲೀದ್ ಅಹ್ಮದ್ ಸೇರಿದಂತೆ ವಿವಿಧ ಗ್ರಾಮ ಪಂಚಾಯತ್ ಆಡಳಿತಾಧಿಕಾರಿಗಳು, ಅಭಿವೃದ್ಧಿ ಅಧಿಕಾರಿಗಳು ಸೇರಿ ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಯಾಪಲದಿನ್ನಿ ಗ್ರಾಮದ ಕಾರ್ಮಿಕನಿಗೆ ಪರಿಹಾರ ನೀಡಲು ಒತ್ತಾಯ

ಪ್ರಕಾರ ಕೆಲಸದ ಸ್ಥಳದಲ್ಲಿ ಕಾರ್ಮಿಕರಿಗೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಟೆಂಟ್ ಸೇರಿದಂತೆ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಬೇಕಾದರೂ, ಸಂಬಂಧಿಸಿದ ಗ್ರಾಮ ಪಂಚಾಯತ್ ಅಧಿಕಾರಿಗಳು ಈ ನಿಯಮಗಳನ್ನು ಪಾಲಿಸಿಲ್ಲ ಎಂಬ ಆರೋಪ ಕೇಳಿಬಂದಿದೆ. ಇದರಿಂದಲೇ ಈ ದುರ್ಘಟನೆ ಸಂಭವಿಸಿದೆ ಎಂದು ಕಾರ್ಮಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ಪ್ರಾಂತ ರೈತ ಸಂಘ ತಾಲ್ಲೂಕು ಸಮಿತಿಯವರು ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳ ಬೇಕು ಹಾಗೂ ಮೃತ ಹುಸೇನಪ್ಪ ಅವರ ಕುಟುಂಬಕ್ಕೆ ತಕ್ಷಣ ಪರಿಹಾರ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ. ತಾಲ್ಲೂಕು ಉಪಾಧ್ಯಕ್ಷ ರಂಗಪ್ಪ ಯಾಪಲದಿನ್ನಿ ಅವರು ಈ ಬಗ್ಗೆ ಮಾತನಾಡಿ, ಮನರೇಗಾ ಕೆಲಸದ ಸ್ಥಳದಲ್ಲಿ ಕಾರ್ಮಿಕರ ಸುರಕ್ಷತೆ ಕಡೆಗಣಿಸಿರುವುದು ಗಂಭೀರ ವಿಷಯ. ಈ ಘಟನೆಗೆ ಕಾರಣರಾದವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು, ಎಂದು ಆಗ್ರಹಿಸಿದ್ದಾರೆ.

## 11 ಆರೋಪಿಗಳ ಬಂಧನ, ಇಬ್ಬರು ಮಹಿಳೆಯರ ರಕ್ಷಣೆ

ಮಹಿಳೆಯರನ್ನು ಸಾಂತ್ವನ ಕೇಂದ್ರಕ್ಕೆ ಕಳುಹಿಸಲಾಗಿದ್ದು, ಅವರ ಆರೋಗ್ಯ ಮತ್ತು ಸುರಕ್ಷತೆ ಕುರಿತು ಕ್ರಮ ಕೈಗೊಳ್ಳಲಾಗಿದೆ. ಈ ಕಾರ್ಯಾಚರಣೆಗೆ ಸಿಂಧನೂರು ಡಿಎಸ್ಪಿ ಚಂದ್ರಶೇಖರ್ ನಾಯಕ್ ನೇತೃತ್ವ ವಹಿಸಿದ್ದು, ಮಾನ್ವಿ ಪೊಲೀಸ್ ಠಾಣೆಯ ಪಿಐ ಸೋಮಶೇಖರ ಎಸ್. ಕೆಂಚರೆಡ್ಡಿ, ಪಿಎಸ್‌ಐ ಅಜೀರ್, ಎಎಸ್‌ಐ ಹನುಮೇಶ್ ಹಾಗೂ ಸಿಬ್ಬಂದಿಗಳಾದ ಹುಸೇನ್ ಸಾಬ್, ಬಸನಗೌಡ, ಸೂಗಪ್ಪ, ಚರಣ, ಪ್ರಕಾಶ್ ಸೇರಿದಂತೆ ಕ್ರೈಂ ಬ್ರಾಂಚ್ ತಂಡದವರು ಭಾಗವಹಿಸಿದ್ದರು. ಈ ಸಂಬಂಧ ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮುಂದಿನ ತನಿಖೆ ಮುಂದುವರಿದಿದೆ.

## ದಿಢೀರ್ ಬೇಟಿ: ಸಮಸ್ಯೆಯಾಗದಂತೆ ಸೌಲಭ್ಯ ಒದಗಿಸಲು ನಿರ್ದೇಶನ

ಕರ್ತವ್ಯದ ಸಮಯದಲ್ಲಿ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚಿಸಿ, ಗೈರುಹಾಜರಿದ್ದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ನಂತರ ಹರಿಜನವಾಡ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆಗಾಗಿ ಬಂದ ಸಾರ್ವಜನಿಕರೊಂದಿಗೆ ಮಾತನಾಡಿ, ಸಿಬ್ಬಂದಿಗಳ ಸ್ಪಂದನೆ, ಚಿಕಿತ್ಸೆ ಹಾಗೂ ಔಷಧ ವಿತರಣೆಯ ಬಗ್ಗೆ ಮಾಹಿತಿ ಪಡೆದರು. ಈ ವೇಳೆ ಕೆಲವರು ಆಸ್ಪತ್ರೆ ಸಿಬ್ಬಂದಿಗಳ ಕರ್ತವ್ಯ ನಿರ್ವಹಣೆಗೆ ಅಡ್ಡಿಪಡಿಸುತ್ತಿರುವ ಕುರಿತು ವೈದ್ಯರು ನೀಡಿದ ಮಾಹಿತಿ ಮೇರೆಗೆ ತಕ್ಷಣ ಡಿವೈಎಸ್‌ಪಿ ಮತ್ತು ಪಿಎಸ್‌ಐ ಅವರಿಗೆ ಕರೆ ಮಾಡಿ ಸೂಕ್ತ ಭದ್ರತೆ ಒದಗಿಸಲು ಸೂಚಿಸಿದರು. ಆಮ್ ತಲಾಬ್ ನಗರ ಪ್ರಸೂತಿ ಕೇಂದ್ರಕ್ಕೂ ಭೇಟಿ ನೀಡಿ ವೈದ್ಯರೊಂದಿಗೆ ಚರ್ಚಿಸಿದ ಅವರು, ಸಿಬ್ಬಂದಿ ಮತ್ತು ಚಿಕಿತ್ಸಾ ಉಪಕರಣಗಳ ಕೊರತೆಯನ್ನು ತಕ್ಷಣವೇ ಡಿಎಚ್‌ಓ ಗಮನಕ್ಕೆ ತಂದರು. ನಗರದ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಮತ್ತು ಔಷಧಗಳ ಕೊರತೆ ಇಲ್ಲದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಅತಿಥಿ ಶಿಕ್ಷಕರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಪ್ರತಿಭಟನೆ

ಹೆಚ್ಚುವರಿಯಾಗಿ 2 ಸಾವಿರ ಹೆಚ್ಚಳ ಮಾಡಿದ್ದು 10 ಸಾವಿರ ಜೊತೆಗೆ 2 ಸಾವಿರ ಕೊಡಬೇಕು, ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಜಿಲ್ಲಾಧ್ಯಕ್ಷ ಚನ್ನಬಸವ ಜಾನೆಕಲ್, ಕಾರ್ಯದರ್ಶಿ ವಿನೋಧ ಕುಮಾರ, ಮಲ್ಲನಗೌಡ, ಅತಿಥಿ ಶಿಕ್ಷಕರಾದ ದತ್ತು ಸ್ವಾಮಿ ಆಲ್ಕೂರು, ಈರೇಶ ಎಲ್ಕೆ ದೊಡ್ಡಿ, ಸರೋಜಾ ಗೋನವಾರ, ತಿಮಲಮ್ಮ, ನರಸಿಂಗಮ್ಮ, ರೇಖಾ, ಮಲ್ಲಿಕಾರ್ಜುನ ತಲಮಾರಿ, ರವಿ ಡಿ.ರಾಂಪೂರ, ರಾಮುಲು ಡಿ.ರಾಂಪೂರ ಸೇರಿದಂತೆ ಅನೇಕರು ಇದ್ದರು.

# ಕೆಎಸ್‌ಡಿಎಲ್‌ನಿಂದ ಮೊದಲ ಬಾರಿ 2,016 ಕೋಟಿ ರೂ. ವಹಿವಾಟು, 507 ಕೋಟಿ ರೂ. ಲಾಭ: ಸಚಿವ ಎಂ.ಬಿ.ಪಾಟೀಲ್

**ಬೆಂಗಳೂರು,ಏ.28**-ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ (ಕೆಎಸ್‌ಡಿಎಲ್) 2025-26ನೇ ಹಣಕಾಸು ವರ್ಷದಲ್ಲಿ ಇದೇ ಮೊದಲ ಬಾರಿಗೆ 2,016 ಕೋಟಿ ರೂ. ವಹಿವಾಟು ನಡೆಸಿದ್ದು, 507 ಕೋಟಿ ರೂ. ಲಾಭ ಗಳಿಸಿದೆ. ಇದು ಸಂಸ್ಥೆಯ ಪಾಲಿಗೆ ಚಾರಿತ್ರಿಕ ಮೈಲುಗಲ್ಲಾಗಿದ್ದು, ಸಾರ್ವಜನಿಕ ಉದ್ದಿಮೆಗಳ ಸಾಧನೆಯಲ್ಲಿ ಕಿರೀಟ ಪ್ರಾಯವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ್ ತಿಳಿಸಿದರು.




ಸಂಸ್ಥೆಯ ಈ ಅಪೂರ್ವ ಸಾಧನೆಯ ಸಂಭ್ರಮಾಚರಣೆಯ ಅಂಗವಾಗಿ ನಗರದ ಖಾಸಗಿ ಹೋಟೆಲ್‌ನಲ್ಲಿ ಏರ್ಪಡಿಸಿದ್ದ ಮೈಸೂರು ಸ್ಯಾಂಡಲ್‌ನ ಸಾಧನೆಯ ಶಿಖರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಂಸ್ಥೆಯು ಮೊದಲ ಒಂದು ಸಾವಿರ ಕೋಟಿ ರೂ. ಗಳ ವಹಿವಾಟನ್ನು ತಲುಪಲು 105 ವರ್ಷ ತೆಗೆದುಕೊಂಡಿತ್ತು. ಆದರೆ, ಅಲ್ಲಿಂದ 2 ಸಾವಿರ ಕೋಟಿ ರೂ. ವನ್ನು ಕೇವಲ ನಾಲ್ಕು ವರ್ಷಗಳಲ್ಲಿ ತಲುಪಿದೆ. ಅದರಲ್ಲೂ 2022-23ರಲ್ಲಿ 1,375 ಕೋಟಿ ರೂ. ವಹಿವಾಟು ನಡೆಸಿದ್ದ ಸಂಸ್ಥೆಯು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕಳೆದ ಮೂರು ವರ್ಷಗಳಲ್ಲಿ 2,016 ಕೋಟಿ ರೂ. ತಲುಪಿದೆ. ಇಷ್ಟು ಅಲ್ಪಾವಧಿಯಲ್ಲಿ ಕೆ.ಎಸ್.ಡಿ.ಎಲ್ ವಹಿವಾಟು 641 ಕೋಟಿ ರೂ. ಹೆಚ್ಚಳ ಕಂಡಿದೆ ಎಂದಿದ್ದಾರೆ.

ಮೊದಲು ಸಂಸ್ಥೆಯು ಕೇವಲ 34 ಉತ್ಪನ್ನಗಳನ್ನು ಹೊಂದಿತ್ತು. ಮೂರು ವರ್ಷಗಳಲ್ಲಿ ನಾವು 57 ಹೊಸ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದ್ದೇವೆ. ಈಗ ಒಟ್ಟು 94 ಉತ್ಪನ್ನಗಳಿವೆ. ಯಾವುದೇ ಹೊಸ ನೇಮಕಾತಿ ಇಲ್ಲದೆ, ಯಂತ್ರೋಪಕರಣಗಳ ಖರೀದಿ ಇಲ್ಲದೆ ಇದನ್ನೆಲ್ಲ ಸಾಧಿಸಲಾಗಿದೆ. ಸಂಸ್ಥೆಯ ಉತ್ಪಾದನಾ ಸಾಮರ್ಥ್ಯ 26 ಸಾವಿರ ಮೆಟ್ರಿಕ್ ಟನ್ ಇದ್ದರೂ ಪರಿಣಾಮಕಾರಿ ಕಾರ್ಯವಿಧಾನದ ಮೂಲಕ 2025-26ರಲ್ಲಿ 47 ಸಾವಿರ ಮೆಟ್ರಿಕ್ ಟನ್ ಉತ್ಪಾದಿಸಲಾಗಿದೆ. ಬಂದಿರುವ 507 ಕೋಟಿ ರೂ. ಲಾಭದಲ್ಲಿ ಸರ್ಕಾರಕ್ಕೆ 157 ಕೋಟಿ ರೂ. ಲಾಭಾಂಶ (ಡಿವಿಡೆಂಡ್) ಮತ್ತು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 5 ಕೋಟಿ ರೂ. ಹಸ್ತಾಂತರಿಸಲಾಗುವುದು. ಹೋದ ವರ್ಷ 135 ಕೋಟಿ ರೂ. ಕೊಡಲಾಗಿತ್ತು. ಇದರಲ್ಲಿ ಈಗ 22 ಕೋಟಿ ರೂ. ಹೆಚ್ಚಳವಾಗಿದೆ ಎಂದು ಅವರು ವಿವರಿಸಿದ್ದಾರೆ.

ನಮ್ಮ ಸರ್ಕಾರ ಅಧಿಕಾರಕ್ಕೆ ಬರುವುದಕ್ಕೂ ಮುನ್ನ ಆಧುನಿಕ ವ್ಯಾಪಾರ ಮತ್ತು ಇ-ಕಾಮರ್ಸ್ ವಹಿವಾಟು ಇರಲಿಲ್ಲ. ನಂತರ ಈ ನಿಟ್ಟಿನಲ್ಲಿ ಪ್ರಯತ್ನ ಮಾಡಿದ್ದಕ್ಕೆ 2025-26ನೇ ಸಾಲಿನಲ್ಲಿ ಆಧುನಿಕ ವ್ಯಾಪಾರ ವಹಿವಾಟಿನಲ್ಲಿ 420 ಕೋಟಿ ರೂ. ಮತ್ತು ಇ-ಕಾಮರ್ಸ್ ವಿಧಾನದಲ್ಲಿ 120 ಕೋಟಿ ರೂ. ದಾಖಲಿಸಿದೆ. ಒಟ್ಟಾರೆಯಾಗಿ ಸಂಸ್ಥೆಯ ವಹಿವಾಟನ್ನು 2028ರ ಹೊತ್ತಿಗೆ 3 ಸಾವಿರ ಕೋಟಿ ರೂ. ಮತ್ತು 2030ರ ಹೊತ್ತಿಗೆ 5 ಸಾವಿರ ಕೋಟಿ ರೂ.ಗಳಿಗೆ ಕೊಂಡೊಯ್ಯುವ ಗುರಿ ಇಟ್ಟುಕೊಳ್ಳಲಾಗಿದೆ. ಇದಕ್ಕೆ ಪೂರಕವಾಗಿ ವಿಜಯಪುರದಲ್ಲಿ 50 ಎಕರೆಯಲ್ಲಿ ನೂತನ ಉತ್ಪಾದನಾ ಘಟಕ ಆರಂಭವಾಗಲಿದ್ದು, ಇದಕ್ಕೆ 229 ಕೋಟಿ ರೂ. ಮಂಜೂರು ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.


ಸಂಸ್ಥೆಯ ಹೆಮ್ಮೆಯ ಉತ್ಪನ್ನವಾದ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕೆಗೆ ಗಂಧದ ಎಣ್ಣೆಯೇ ಮೂಲವಸ್ತುವಾಗಿದೆ. ಇದರ ಸುಗಮ ಪೂರೈಕೆಗೆ ಸಂಸ್ಥೆಯು ರೈತರೊಂದಿಗೆ ಕೈಜೋಡಿಸಿ ಗ್ರೋ ಮೋರ್ ಸ್ಯಾಂಡಲ್‌ಕಾರ್ಯಕ್ರಮ ರೂಪಿಸಿದೆ. ಇದರಡಿಯಲ್ಲಿ 10 ವರ್ಷಗಳಲ್ಲಿ 10 ಸಾವಿರ ಎಕರೆ ಗಂಧದ ನೆಡುತೋಪು ಬೆಳೆಸಲಾಗುವುದು. ಇದಕ್ಕಾಗಿ ರೈತರಿಗೆ ಪ್ರತೀ ಗಂಧದ ಗಿಡಕ್ಕೆ 3 ವರ್ಷಗಳಿಗೆ 500 ರೂ. ಪ್ರೋತ್ಸಾಹಧನ ನೀಡಲಾಗುವುದು. ಜತೆಗೆ ಬೆಂಗಳೂರಿನ ಜಿಕೆವಿಕೆ ಮತ್ತು ವಿಜಯಪುರದ ಕೃಷಿ ವಿದ್ಯಾಲಯಗಳ ಸಹಯೋಗದಲ್ಲಿ ಶ್ರೀಗಂಧದ ಅಧ್ಯಯನ ಪೀಠ ತೆರೆಯಲಾಗುವುದು ಎಂದು ತಿಳಿಸಿದ್ದಾರೆ.

ನಮ್ಮ ಸರ್ಕಾರ ಬಂದು ಮೂರು ವರ್ಷಗಳಾದ ಮೇಲೆ ಹೊಸ ಯಂತ್ರೋಪಕರ ಣಗಳ ಖರೀದಿಗೆ 15 ಕೋಟಿ ರೂ. ಮೊತ್ತದ ಟೆಂಡರ್ ಕರೆಯಲಾಗಿದೆ. ಅಲ್ಲದೆ, ವಿದೇಶಗಳಿಗೆ ರಫ್ತು ಮತ್ತು ಅಖಿಲ ಭಾರತ ಮಟ್ಟದಲ್ಲಿ ಮಾರುಕಟ್ಟೆ ವಿಸ್ತರಣೆಗೆ ಕ್ರಮ ಕೈಗೊಳ್ಳಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಸಂಸ್ಥೆಯು ರೈತರಿಂದಲೇ ನೇರವಾಗಿ 174 ಟನ್ ಗಂಧ ಖರೀದಿಸಿದ್ದು, 6.08 ಕೋಟಿ ರೂ.ಗಳನ್ನು ನೇರ ಪಾವತಿ ಮಾಡಿದೆ. ಸಂಸ್ಥೆಯು ಬೆಂಗಳೂರು, ಡಾಬಸಪೇಟೆ, ಮೈಸೂರು ಮತ್ತು ಶಿವಮೊಗ್ಗದಲ್ಲಿ ಖಾಲಿ ಜಾಗ ಹೊಂದಿದ್ದು, ಇವುಗಳ ಸದ್ಬಳಕೆಗೆ ನೀಲನಕ್ಷೆ ಸಿದ್ಧಪಡಿಸಲಾಗಿದೆ. ಇದು ಸಾಧ್ಯವಾದರೆ ಸಂಸ್ಥೆಯ ಪಾಲಿಗೆ ಆರ್ಥಿಕ ಹರಿವಿನ ಶಾಶ್ವತ ಸಂಪನ್ಮೂಲವೊಂದು ಸೃಷ್ಟಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಸಂಸ್ಥೆಯ ಅಧ್ಯಕ್ಷ ಸಿ. ಎಸ್. ಅಪ್ಪಾಜಿ ನಾಡಗೌಡ ಮಾತನಾಡಿ, ಕಾರ್ಖಾನೆಯ ಈ ಸಾಧನೆಗೆ ಸಹಕರಿಸಿದ ಸಚಿವ ಪಾಟೀಲ ಹಾಗೂ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಅವರಿಗೆ ಧನ್ಯವಾದಗಳನ್ನು ತಿಳಿಸುತ್ತೇನೆ. ಮುಂದಿನ ದಿನಗಳಲ್ಲಿ ಯುನೈಟೆಡ್ ಎಮಿರೇಟ್ಸ್ ದೇಶಗಳಲ್ಲಿಯೂ ಮಾರುಕಟ್ಟೆ ವಿಸ್ತರಣೆ ಮಾಡಲು ಯೋಜನೆ ರೂಪಿಸುತ್ತಿದ್ದೇವೆ. ಸೋಪು ಮಾತ್ರವಲ್ಲದೆ, ಕಾಸ್ಮೆಟಿಕ್, ಸುಗಂಧ ದ್ರವ್ಯ ವಿಭಾಗದಲ್ಲೂ ಉತ್ಪನ್ನಗಳನ್ನು ಮಾರುಕಟ್ಟೆ ವಿಸ್ತರಣೆ ಮಾಡುತ್ತೇವೆ ಎಂದು ಹೇಳಿದ್ದಾರೆ.

## ಕಲಬುರಗಿ: ಪತ್ನಿ ಕೊಲೆ ಮಾಡಿ ಮಗುವಿನೊಂದಿಗೆ ಬಾವಿಗೆ ಹಾರಿ ಪತಿ ಆತ್ಮಹತ್ಯೆ: ಮಗು ರಕ್ಷಿಸಿದ ಸ್ಥಳೀಯರು..!

**ಕಲಬುರಗಿ,ಏ.28**-ಕಲಬುರಗಿ ಜಿಲ್ಲೆಯ ಅಫಜಲಪುರ ತಾಲೂಕಿನ ಮದರಾ(ಕೆ) ಗ್ರಾಮದ ಬಳಿ ಹೃದಯ ವಿದ್ರಾವಕ ಘಟನೆ ನಡೆದಿದ್ದು, ಕೌಟುಂಬಿಕ ಕಲಹದ ಹಿನ್ನೆಯಲ್ಲಿ ವ್ಯಕ್ತಿಯೊಬ್ಬರು ತನ್ನ ಪತ್ನಿಯನ್ನು ಬರ್ಬರವಾಗಿ ಕೊಲೆ ಮಾಡಿ, ನಂತರ ತನ್ನ ಮಗುವಿನೊಂದಿಗೆ ಬಾವಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.



ಪತ್ನಿ ಕೊಲೆ ಮಾಡಿ ಆತ್ಮಹತ್ಯೆಗೆ ಶರಣಾದ ವ್ಯಕ್ತಿಯನ್ನು ಲಕ್ಷ್ಮೀಪುತ್ರ ಎಂದು ಗುರುತಿಸಲಾಗಿದ್ದು, ತನ್ನ 23 ವರ್ಷದ ಪತ್ನಿ ಅಂಜಲಿಯನ್ನು ಮನೆಯಲ್ಲೇ ಕುಡುಗೋಲಿನಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಬಳಿಕ ತನ್ನ ಪುಟ್ಟ ಮಗುವನ್ನು ಎತ್ತಿಕೊಂಡು ಮದರಾ (ಕೆ) ಗ್ರಾಮದ ಸಮೀಪದ ಬಾವಿಗೆ ಜಿಗಿದಿದ್ದಾನೆ.

ಲಕ್ಷ್ಮೀಪುತ್ರ ಮಗುವಿನೊಂದಿಗೆ ಬಾವಿಗೆ ಹಾರುತ್ತಿರುವುದನ್ನು ಗಮನಿಸಿದ ಕೆಲವು ಸ್ಥಳೀಯರು ತಕ್ಷಣ ಸ್ಥಳಕ್ಕೆ ಧಾವಿಸಿದ್ದಾರೆ. ಸಮಯಪ್ರಜ್ಞೆ ಮೆರೆದ ಗ್ರಾಮಸ್ಥರು ಕೂಡಲೇ ಬಾವಿಗೆ ಜಿಗಿದು ಮಗುವನ್ನು ಸುರಕ್ಷಿತವಾಗಿ ರಕ್ಷಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಲಕ್ಷ್ಮೀಪುತ್ರ ಬಾವಿಯ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ.

ಈ ಘಟನೆ ನಡೆದ ತಕ್ಷಣ ರೇವೂರು ಪೊಲೀಸರು ಮತ್ತು ಸೋಕೋ(ಖಿಓಇಅ) ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಅಂಜಲಿಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಬಾವಿಯಿಂದ ಲಕ್ಷ್ಮೀಪುತ್ರನ ಶವವನ್ನು ಹೊರತೆಗೆಯಲಾಗಿದೆ.ಈ ಸಂಬಂಧ ರೇವೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕೊಲೆ ಮತ್ತು ಆತ್ಮಹತ್ಯೆಗೆ ನಿಖರವಾದ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

## ರಾಜ್ಯದ ಎಲ್ಲಾ ಶಾಲೆಗಳಲ್ಲಿ ಪ್ರತಿನಿತ್ಯ 10-15 ನಿಮಿಷ ಪತ್ರಿಗೆ ಓದುವುದು ಕಡ್ಡಾಯ..!

**ಬೆಂಗಳೂರು,ಏ.28**-ಮಕ್ಕಳಲ್ಲಿ ಹೆಚ್ಚುತ್ತಿರುವ ಡಿಜಿಟಲ್ ವ್ಯಸನವನ್ನು ನಿಯಂತ್ರಿಸಲು ಶಿಕ್ಷಣ ಇಲಾಖೆ ಹೊಸ ಕ್ರಮ ಕೈಗೊಂಡಿದೆ. ಇನ್ನು ಮುಂದೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಪ್ರತಿದಿನ 10 ರಿಂದ 15 ನಿಮಿಷಗಳ ಕಾಲ ಪತ್ರಿಕೆ ಓದುವುದನ್ನು ಕಡ್ಡಾಯಗೊಳಿಸಲಾಗಿದೆ.

ಈ ಕ್ರಮದಿಂದ ವಿದ್ಯಾರ್ಥಿಗಳ ಓದುವ ಅಭ್ಯಾಸವನ್ನು ಉತ್ತೇಜಿಸಿ, ಡಿಜಿಟಲ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಉದ್ದೇಶವನ್ನು ಹೊಂದಲಾಗಿದೆ.ಡಿಜಿಟಲ್ ಯುಗದಲ್ಲಿ ಮಕ್ಕಳು ಮೊಬೈಲ್ ಫೋನ್, ಸಾಮಾಜಿಕ ಜಾಲತಾಣಗಳು ಮತ್ತು ಇಂಟರ್ನೆಟ್ ವ್ಯಸನಕ್ಕೆ ತುತ್ತಾಗುತ್ತಿರುವುದನ್ನು ಗಮನಿಸಿದ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಈ ಕುರಿತು ಶಿಫಾರಸು ಮಾಡಿತ್ತು.

ಈ ಶಿಫಾರಸಿನ ಆಧಾರದ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ನಿರ್ಧಾರಕ್ಕೆ ಅನುಮೋದನೆ ನೀಡಿದ್ದಾರೆ. ಮಕ್ಕಳನ್ನು ಮತ್ತೆ ಓದಿನ ಕಡೆಗೆ ಸೆಳೆಯುವುದು ಮತ್ತು ಅವರಲ್ಲಿ ವಿಮರ್ಶಾತ್ಮಕ ಚಿಂತನೆಯನ್ನು ಪ್ರೋತ್ಸಾಹಿಸುವುದು ಇದರ ಮುಖ್ಯ ಗುರಿಯಾಗಿದೆ.

ಶಿಕ್ಷಣ ಇಲಾಖೆಯ ಆದೇಶದಂತೆ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆಗಳಿಗೂ ಈ ನಿಯಮ ಅನ್ವಯಿಸುತ್ತದೆ. ಅಷ್ಟೇ ಅಲ್ಲದೆ, ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ, ಸಂತ ರೋಷಾ, ಮತ್ತು ಎಲ್ಲಾ ಹಾಸ್ಟೆಲ್‌ಗಳಲ್ಲೂ ಈ ಕ್ರಮ ಕಡ್ಡಾಯವಾಗಿದೆ. ಆದೇಶ ಉಲ್ಲಂಘಿಸಿದ ಶಾಲೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಲಾಗಿದೆ.

ಪ್ರತಿದಿನ ಬೆಳಗಿನ ಪ್ರಾರ್ಥನೆಯ ನಂತರ ಕನಿಷ್ಠ 10 ರಿಂದ 15 ನಿಮಿಷಗಳ ಕಾಲ ವಿದ್ಯಾರ್ಥಿಗಳು ಕನ್ನಡ ದಿನಪತ್ರಿಕೆಯನ್ನು ಓದಬೇಕು. ಈ ಸಮಯದಲ್ಲಿ ಪತ್ರಿಕಾ ವಾಚನಕ್ಕೆ ಪ್ರತ್ಯೇಕ ಕಾಲಾವಕಾಶವನ್ನು ವೇಳಾಪಟ್ಟಿಯಲ್ಲಿ ನಮೂದಿಸಬೇಕು. ವಿದ್ಯಾರ್ಥಿಗಳು ತಮ್ಮ ಇಷ್ಟದ ಯಾವುದೇ ಕನ್ನಡ ದಿನಪತ್ರಿಕೆಯಾದರೂ ಆರಿಸಿಕೊಳ್ಳಬಹುದು. ಮುಖ್ಯಮಂತ್ರಿ ಸಿದ್ದರಾಮ ಯ್ಯ ಅವರು ಈಗಾಗಲೇ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿಷೇಧಿಸುವ ಬಗ್ಗೆ ಬಜೆಟ್‌ನಲ್ಲಿ ಘೋಷಿಸಿದ್ದು, ಅದರ ಮುಂದಿನ ಭಾಗವಾಗಿ ಈ ಶೈಕ್ಷಣಿಕ ಸುಧಾರಣೆ ಜಾರಿಗೆ ಬಂದಿದೆ.

ಈ ನೂತನ ನಿಯಮವು ಮಕ್ಕಳನ್ನು ಬಾಹ್ಯ ಜಗತ್ತಿನ ವಿದ್ಯಮಾನಗಳೊಂದಿಗೆ ಸಂಪರ್ಕಿಸಲು ಮತ್ತು ಅವರಲ್ಲಿ ಓದುವ ಆಸಕ್ತಿ ಮೂಡಿಸಲು ಸಹಕಾರಿಯಾಗಲಿದೆ ಎಂದು ಶಿಕ್ಷಣ ಇಲಾಖೆ ವಿಶ್ವಾಸ ವ್ಯಕ್ತಪಡಿಸಿದೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮಲಿಯಾಬಾದ್ ಪ್ರೌಢಶಾಲೆಗೆ ಶೇ. 100 ರಷ್ಟು ಫಲಿತಾಂಶ

ಸ್ಥಾನ ಪಡೆದಿದ್ದಾರೆ. ಕುಮಾರಿ ಉರುಕುಂದಮ್ಮ (ತಂದೆ: ಈ ವೀರೇಶ್) 520 ಅಂಕಗಳನ್ನು ಪಡೆದು ಶೇ. 83.20ರಷ್ಟು ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ. ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳಿಗೆ ಹಾಗೂ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಶಾಲೆಯ ಮುಖ್ಯೋಪಾಧ್ಯಾಯರು, ಸಹ ಶಿಕ್ಷಕರು, ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಶಿಕ್ಷಣ ಪ್ರೇಮಿಗಳು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

## ಪಾಲಿಕೆ ಆಯುಕ್ತರಿಂದ ದಂಡ ಹಾಕುವ ಆದೇಶ ರದ್ದುಪಡಿಸದಿದ್ದರೆ ಕಚೇರಿಗೆ ಮುತ್ತಿಗೆ- ವಿನೋಧರೆಡ್ಡಿ

ಅನುಭವಿಸುತ್ತಿದ್ದಾರೆ. ಜನರ ಸಂಕಷ್ಟಗಳಿಗೆ ಸ್ಪಂದಿಸದ ಬೇಕಿದ್ದ ಪಾಲಿಕೆ ಯಾವುದೇ ವ್ಯವಸ್ಥೆ ಮಾಡಿಲ್ಲ. ಜನರಿಗೆ ವ್ಯವಸ್ಥೆ ಮಾಡದೇ ಇದ್ದರೂ 500 ರೂರಿಂದ ಒಂದು ಸಾವಿರ ರೂವರೆಗೆ ದಂಡ ಹಾಕುವದಾಗಿ ಬೆದರಿಸುತ್ತಿರುವದು ಯಾವ ನ್ಯಾಯ. ಮೊದಲು ನಗರ ವಿವಿಧಡೆ ಶೌಚಾಲಯಗಳನ್ನು ನಿರ್ಮಾಣ ಮಾಡಬೇಕು. ಹಳೆ ನಗರಸಭೆ ಕಚೇರಿಯಲ್ಲಿಯೇ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಜನರಿಗೆ ಒದಗಿಸಿಲ್ಲ. ಟೆಕ್ಸ್ ಕಟ್ಟಲು ಬರುವ ಜನರು ಪರದಾಡುತ್ತಿದ್ದಾರೆ. ಹೈಟೆಕ್ ಮೊಬೈಲ್ ವಾಹನಗಳನ್ನಾದರೂ ವ್ಯವಸ್ಥೆ ಮಾಡಬೇಕು. ಶೌಚಾಲಯ ನಿರ್ಮಾಣ ಮಾಡದೇ ದಂಡ ಹಾಕುವನ್ನು ನಿಲ್ಲಿಸಬೇಕು. ವಾರದಲ್ಲಿ ವ್ಯವಸ್ಥೆ ಮಾಡಬೇಕು. ಇಲ್ಲದೇ ಹೋದಲ್ಲಿ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸುವದಾಗಿಹೇಳಿದರು. ಈ ಸಂದರ್ಭದಲ್ಲಿ ಎಂ.ಎಸ್.ವೆಂಕಟೇಶ ದೇವದುರ್ಗ, ಗುರುರಾಜರೆಡ್ಡಿ, ನಿಜಾಮುದ್ದೀನ್, ಯು.ಗೋವಿಂದರೆಡ್ಡಿ, ವೀರೇಶ ಸೋನಾ ಇದ್ದರು.

## ಬೆಂಗಳೂರಿನ ಶ್ವಾಸತಾಣಗಳ ಸಂರಕ್ಷಣೆ ಸಂವರ್ಧನೆಗೆ ಕ್ರಮ-ಸಚಿವ ಈಶ್ವರ್ ಖಂಡ್ರೆ

**ಬೆಂಗಳೂರು,ಏ.28**-ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮ ತಗ್ಗಿಸಲು ಕರ್ನಾಟಕ ರಾಜ್ಯ ಕ್ರಿಯಾ ಯೋಜನೆ (ಕೆಎಸ್‌ಎಪಿಸಿಸಿ) ರೂಪಿಸಲಾಗಿದ್ದು, ಇದರ ಸಮರ್ಪಕ ಅನುಷ್ಠಾನಕ್ಕೆ ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಹೇಳಿದರು. ಕರ್ನಾಟಕ ಮಾಧ್ಯಮ ಅಕಾಡೆಮಿ ಆಯೋಜಿಸಿದ್ದ ವಿಪರೀತ ಬಿಸಿ ಮತ್ತು ಬೆಂಗಳೂರಿನ ಮೇಲೆ ಅದರ ಪರಿಣಾಮ ಕುರಿತ ವಿಚಾರ ಸಂಕಿರ್ಣದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈ ಕ್ರಿಯಾ ಯೋಜನೆಯನ್ನು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಾರಿಗೆ ತರಲು ಪರಿಸರ ಇಲಾಖೆ ವ್ಯಾಪ್ತಿಗೆ ಒಳಪಡುವ ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ ಕ್ರಮ ಕೈಗೊಂಡಿದೆ ಎಂದರು.

ಜಿಲ್ಲಾ ಪಂಚಾಯತ್ ಕಚೇರಿಗಳ ಸಹಯೋಗದೊಂದಿಗೆ ಕೆಎಸ್‌ಎಪಿಸಿಸಿ ಅನುಷ್ಠಾನ ಮತ್ತು ಅದರ ಪ್ರಗತಿಯ ಕುರಿತು ಜಿಲ್ಲಾ ಅಧಿಕಾರಿಗಳು ಮತ್ತು ಇತರೆ ಸಂಬಂಧಿತ ಸಂಸ್ಥೆಗಳಿಗೆ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕರ್ನಾಟಕದ ಎಲ್ಲಾ 31 ಜಿಲ್ಲೆಗಳಲ್ಲಿ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದೂ ತಿಳಿಸಿದರು. ಹವಾಮಾನ-ಚೇತರಿಕೆಗೆ ಸಂಬಂಧಿಸಿದಂತೆ ಉತ್ತಮ ರೂಢಿಗಳ ಮಾಹಿತಿಯನ್ನು ಹಂಚಿಕೊಳ್ಳಲು ಎಪ್ರಿಲ್ 2025ರಲ್ಲಿ ಸಮರ್ಪಿತ ರೇಡಿಯೋ ಕಾರ್ಯಕ್ರಮ ಹವಾಮಾನ ಮಿತ್ರ ಪ್ರಾರಂಭಿಸಲಾಗಿದ್ದು, ಈವರೆಗೆ 24 ಕಾರ್ಯಕ್ರಮಗಳನ್ನು ಆಕಾಶವಾಣಿಯಲ್ಲಿ ಪ್ರಸಾರ ಮಾಡಲಾಗಿದೆ. ಈ ಮೂಲಕ ಜನಜಾಗೃತಿ ಮೂಡಿಸುವ ಪ್ರಯತ್ನಗಳು ನಡೆದಿವೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

ಬೆಂಗಳೂರಿನ ಶ್ವಾಸತಾಣಗಳ ರಕ್ಷಣೆಗೆ ಕ್ರಮ : ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯಿಂದಾಗಿ ಇಂದು ಋತುಮಾನಗಳೇ ಬದಲಾಗುತ್ತಿವೆ. ಇದನ್ನು ಮನಗಂಡು ನಾನು ಅರಣ್ಯ ಸಚಿವನಾದ ಬಳಿಕ ಹಸಿರುಹೊದಿಕೆಯನ್ನು ಹೆಚ್ಚಿಸಲು ಸಕಲ ಪ್ರಯತ್ನ ಮಾಡುತ್ತಿದ್ದೇನೆ ಎಂದು ತಿಳಿಸಿದರು.

ರಾಜ್ಯದ ಎಲ್ಲೆಡೆ ಅದರಲ್ಲೂ ಬೆಂಗಳೂರು ನಗರದಲ್ಲಿ ಹಸಿರುಹೊದಿಕೆ ಹೆಚ್ಚಿಸಲು ಶ್ರಮಿಸುತ್ತಿದ್ದೇನೆ. ಕಳೆದ 3 ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ ಸುಮಾರು 11 ಕೋಟಿ ಸಸಿಗಳನ್ನು ನೆಡಲಾಗಿದೆ. ಈ ಸಸಿಗಳ ಪೈಕಿ ಎಷ್ಟು ಬದುಕುಳಿದಿವೆ ಎಂಬ ಮಾಹಿತಿಯನ್ನು ಅರಣ್ಯ ಇಲಾಖೆಯ ವೆಬ್‌ಸೈಟ್‌ನಲ್ಲಿ ಹಾಕುವ ಮೂಲಕ ಪಬ್ಲಿಕ್ ಡೊಮೈನ್‌ನಲ್ಲಿ ಮಾಹಿತಿ ಒದಗಿಸಲಾಗಿದೆ ಎಂದು ಹೇಳಿದರು.



ಬೆಂಗಳೂರು ನಗರದ ಕೊತ್ತನೂರು, ಕಾಡುಗೋಡಿ, ಬಿ. ಎಂ. ಕಾವಲ್, ತುರಹಳ್ಳಿ ಸೇರಿದಂತೆ ಹಲವು ಕಡೆಗಳಲ್ಲಿ ಆಗಿದ್ದ ಸುಮಾರು 10 ಸಾವಿರ ಕೋಟಿ ರೂ. ಬೆಲೆ ಬಾಳುವ 250 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವು ಮಾಡಿಸಲಾಗಿದೆ. ಒತ್ತುವರಿ ತೆರವು ಮಾಡಿದ ಜಾಗದಲ್ಲಿ ಸಾವಿರಾರು ಗಿಡಗಳನ್ನು ನೆಟ್ಟು ನೆಡುತೋಪು ನಿರ್ಮಾಣ ಮಾಡಲಾಗಿದೆ. ಈ ಮೂಲಕ ಬೆಂಗಳೂರು ನಗರಕ್ಕೆ ಅತ್ಯಗತ್ಯವಾದ ಶ್ವಾಸತಾಣ (ಲಂಗ್ಸ್ ಸ್ಪೇಸ್) ಉಳಿಸಲಾಗಿದೆ ಎಂದು ತಿಳಿಸಿದರು.

ಅದೇ ರೀತಿ ಈ ಹಿಂದೆ ಕೈಗಾರಿಕೆಯ ಉದ್ದೇಶಕ್ಕಾಗಿ ಕೇಂದ್ರ ಸರ್ಕಾರಿ ಸ್ವಾಮ್ಯದ ಹೆಚ್‌ಎಂಟಿಗೆ ಪೀಣ್ಯ ಪ್ಲಾಂಟೇಷನ್‌ನಲ್ಲಿ ಸುಮಾರು 400 ಎಕರೆಗೂ ಹೆಚ್ಚು ಅರಣ್ಯ ಭೂಮಿಯನ್ನು ನೀಡಲಾಗಿತ್ತು. ಹೆಚ್‌ಎಂಟಿ ಇಲ್ಲಿ 160 ಎಕರೆ ಅರಣ್ಯ ಭೂಮಿಯನ್ನು ಮಾರಾಟ ಮಾಡಿದ್ದಾರೆ. ಇನ್ನೂ ಅಲ್ಲಿ 280 ಎಕರೆ ಅರಣ್ಯ ಉಳಿದಿದ್ದು, ಇದನ್ನು ಮರಳಿ ಇಲಾಖೆಗೆ ಪಡೆದು ಬೆಂಗಳೂರು ನಗರಕ್ಕೆ ಅತ್ಯಗತ್ಯವಾದ ಶ್ವಾಸತಾಣವನ್ನು ಉಳಿಸಲು ತೀರ್ಮಾನಿಸಲಾಗಿದೆ. ಇದಕ್ಕಾಗಿ ಕಾನೂನು ಹೋರಾಟ ನಡೆಯುತ್ತಿದೆ. ಪ್ರಸ್ತುತ ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿದೆ ಎಂದರು.ಇದರ ಜೊತೆಗೆ ಜಾರಕಬಂಡೆ ಪ್ರದೇಶದಲ್ಲಿ ಭಾರತೀಯ ವಾಯುಪಡೆಗೆ 444 ಎಕರೆ ಭೂಮಿಯನ್ನು ನೀಡಲಾಗಿತ್ತು. 1980ರ ಕಾಯ್ದೆ ರೀತ್ಯ ಅರಣ್ಯ ಭೂಮಿಯನ್ನು ಯಾರಿಗೂ ನೀಡಲು ಅವಕಾಶವಿಲ್ಲ. ಹೀಗಾಗಿ, 2017ರಲ್ಲಿ ಅಂದಿನ ಜಿಲ್ಲಾಧಿಕಾರಿ ಈ ಭೂ ಮಂಜೂರಾತಿ ರದ್ದು ಮಾಡಿದ್ದಾರೆ. ಈಗ ಆ ಅರಣ್ಯ ಭೂಮಿಯನ್ನು ಮರಳಿ ಇಲಾಖೆಗೆ ಪಡೆದು ಹಸಿರು ತಾಣ ಉಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಏರ್ ಶೋ ನಡೆಯುವ ಭೂಮಿಯೂ ಅರಣ್ಯ : ಬೆಂಗಳೂರಿನಲ್ಲಿ ಪ್ರತಿ 2 ವರ್ಷಗಳಿಗೊಮ್ಮೆ ಅಂತಾರಾಷ್ಟ್ರೀಯ ವೈಮಾನಿಕ ಪ್ರದರ್ಶನ ಏರ್ ಶೋ ನಡೆಯುವ ಗಂಟಿಗಾನಹಳ್ಳಿಯಲ್ಲಿರುವ ಯಲಹಂಕ ವಾಯುನೆಲೆ ಕೂಡ ಅರಣ್ಯ ಭೂಮಿಯಾಗಿದೆ. ಗಂಟಿಗಾನಹಳ್ಳಿ ಗ್ರಾಮದ 159 ಎಕರೆ ಪ್ರದೇಶ ಸರ್ಕಾರಿ ಕಾಯ್ದಿಟ್ಟ ಅರಣ್ಯ ಪ್ರದೇಶವಾಗಿದ್ದು, ವಾಯುಪಡೆ ತೀರುವಳಿ ಪ್ರಸ್ತಾವನೆ ಸಲ್ಲಿಸಿ, ಪರ್ಯಾಯ ಭೂಮಿ ನೀಡಿದರೆ, ಈ ಪ್ರದೇಶವನ್ನು ಪಡೆಯದಿದ್ದರೆ,

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L